ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 103 RNI Number : KNKAN/25/A2770 22-04-2026 Wednesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :103 ರಾಯಚೂರು 22-04-2026 ಬುಧವಾರ ಪುಟ 04 ಬೆಲೆ ರೂ.2/- ಮೊ:8660146563

ಕಾಂಗ್ರೆಸ್‌ನವರ ಮೇಲೆ ಮಾತ್ರ ಇ.ಡಿ ದಾಳಿ, ಬಿಜೆಪಿ ಮುಖಂಡರ ಮೇಲೆ ಏಕಿಲ್ಲ?: ಸಿಎಂ

ಚಾಮರಾಜನಗರ,ಏ.21-

ಕೇಂದ್ರ ಸರ್ಕಾರ ಕಾಂಗ್ರೆಸ್‌ನವರನ್ನು ಮಾತ್ರ ಗುರಿಯಾಗಿಸಿಕೊಂಡು ದಾಳಿ ಮಾಡಿಸುತ್ತಿದ್ದು, ಬಿಜೆಪಿಯವರ ಮೇಲೆ ದಾಳಿ ಆಗುತ್ತಿಲ್ಲ ಎಂದು ಸಿಎಂ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದರು. ಶಾಸಕ ಹ್ಯಾರಿಸ್ ಪುತ್ರ ನಲಪಾಡ್ ಅವರ ಮನೆ ಮೇಲೆ ಜಾರಿ ನಿರ್ದೇಶನಾಲಯ (ಇ.ಡಿ)ದ ಅಧಿಕಾರಿಗಳು ನಿನ್ನೆ ದಾಳಿ ನಡೆಸಿರುವ ಕುರಿತ ಪ್ರಶ್ನೆಗೆ ಅವರು ಉತ್ತರಿಸಿದರು.

ಗುಂಡ್ಲುಪೇಟೆಯಲ್ಲಿಂದು ಮಾಧ್ಯಮದವರೊಂದಿಗೆ ಅವರು ಮಾತನಾಡಿದರು.

ಮೂಢನಂಬಿಕೆಗಳ ಬಗ್ಗೆ ನನಗೆ ನಂಬಿಕೆ ಇಲ್ಲ. ಹಾಗಾಗಿ ಚಾಮರಾಜನಗರಕ್ಕೆ ಸಾಕಷ್ಟು ಬಾರಿ ಭೇಟಿ ನೀಡುತ್ತಿದ್ದೇನೆ. ಇಲ್ಲಿಗೆ ಬಂದರೆ ಕುರ್ಚಿ ಗಟ್ಟಿಯಾಗುತ್ತದೆ ಎಂದು ಪ್ರಾಸಂಗಿಕವಾಗಿ ಹೇಳಿದ್ದೆ ಎಂದರು.

ಗ್ಯಾರಂಟಿ ಯೋಜನೆಗಳನ್ನು ವಿರೋಧಿಸುತ್ತಿದ್ದವರೇ ಅದನ್ನು ಘೋಷಣೆ ಮಾಡುತ್ತಿರುವ ಬಗ್ಗೆ ಪ್ರತಿಕ್ರಿಯಿಸಿ, ವಿರೋಧಿಸುತ್ತಿದ್ದವರಿಗೆ ಗ್ಯಾರಂಟಿಗಳು ಬಡವರ ಕಾರ್ಯಕ್ರಮಗಳೆಂದು ಗೊತ್ತಾಗಿದೆ ಎಂದು ಹೇಳಿದರು.



ನಾರಿ ಶಕ್ತಿ ವಂದನ್ ವಿರೋಧಿಸಿದ ಕಾಂಗ್ರೆಸ್ 'ಮಹಿಳಾ ವಿರೋಧಿಗಳು' ಎಂಬ ಬಿಜೆಪಿ ಆರೋಪಕ್ಕೆ, ಬಿಜೆಪಿಯವರೇ ಮಹಿಳಾ ಮೀಸಲಾತಿ ವಿರೋಧಿಗಳು. ರಾಜೀವ್ ಗಾಂಧಿ ಪ್ರಧಾನಿಯಾಗಿದ್ದ ಸಂದರ್ಭದಲ್ಲಿ ಸಂವಿಧಾನಕ್ಕೆ 73, 74ನೇ ತಿದ್ದುಪಡಿಗಳನ್ನು ಮಾಡಿ ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳಾ ಮೀಸಲಾತಿ ತಂದರು. ಅದನ್ನು ರಾಜ್ಯಸಭೆಯಲ್ಲಿ ಕೆಡವಿದವರು ಇವರು. ಎನ್‌ಡಿಎ ಈಗ ರಾಜಕೀಯಕ್ಕಾಗಿ ಕ್ಷೇತ್ರ ಮರುವಿಂಗಡನೆ ಸೇರಿಸಿ ಮೀಸಲಾತಿ ಮಸೂದೆ ಮಂಡಿಸಿದ್ದಾರೆ. ನಮ್ಮದು ಕ್ಷೇತ್ರ ಮರುವಿಂಗಡಣೆ ವಿರೋಧವೇ ಹೊರತು ಮಹಿಳಾ ಮೀಸಲಾತಿಗೆ ಅಲ್ಲ ಎಂದು ಸ್ಪಷ್ಟಪಡಿಸಿದರು.

ತೃತೀಯ ಭಾಷೆಗೆ ಅಂಕ ಕೊಡಬೇಕೆಂಬ ನ್ಯಾಯಾಲಯದ ನಿರ್ದೇಶನವನ್ನು ಪಾಲಿಸಲಾಗುವುದು. ತೃತೀಯ ಭಾಷೆಗೆ ಹಿಂದಿನ ವರ್ಷಗಳಂತೆಯೇ ಮೌಲ್ಯಮಾಪನ ಮಾಡಿ ಅಂಕಗಳನ್ನು ನೀಡಬೇಕೆಂದು ಉಚ್ಚ ನ್ಯಾಯಾಲಯ ಹೇಳಿ ಮುಂದಿನ ತೀರ್ಮಾನ ಮಾಡಲು ಸೂಚಿಸಿದ್ದು, ನ್ಯಾಯಾಲಯದ ನಿರ್ದೇಶನ ಪಾಲಿಸುತ್ತೇವೆ ಎಂದರು.

ತಮ್ಮನ್ನು ಕಡೆಗಣಿಸುತ್ತಿದ್ದಾರೆಂದು ಹೈಕಮಾಂಡ್‌ಗೆ ಅಲ್ಪಸಂಖ್ಯಾತರು ಪತ್ರ ಬರೆದಿರುವ ಬಗ್ಗೆ ಮಾತನಾಡಿ, ವರಿಷ್ಠರು ತೀರ್ಮಾನ ಕೈಗೊಳ್ಳುವಾಗ ಅಲ್ಪಸಂಖ್ಯಾತರ ನಾಯಕರು ಉಪಸ್ಥಿತರಿದ್ದರು. ಅವರೆದುರೇ ತೀರ್ಮಾನವಾಗಿತ್ತು, ನಂತರ ಅವರು ವಿರೋಧಿಸಿದರು ಎಂದು ಹೇಳಿದರು.

ಇದೇ ವೇಳೆ, ದಾವಣಗೆರೆ ಮತ್ತು ಬಾಗಲಕೋಟೆ ಕ್ಷೇತ್ರದ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಗೆಲುವು ಸಾಧಿಸಲಿದ್ದಾರೆ ಎಂದು ಸಿದ್ದರಾಮಯ್ಯ ವಿಶ್ವಾಸ ವ್ಯಕ್ತಪಡಿಸಿದರು.

ಡಾ.ರಾಜಕುಮಾರ್ ಜಯಂತಿ ಅರ್ಥಪೂರ್ಣ ಆಚರಣೆ: ಎಡಿಸಿ ಶಿವಾನಂದ

ರಾಯಚೂರು ಏಪ್ರಿಲ್ 21

ನಟ ಸಾರ್ವಭೌಮ, ವರನಟ ಡಾ.ರಾಜ್ ಕುಮಾರ್ ಅವರ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಪ್ರತಿ ವರ್ಷದಂತೆ ಈ ವರ್ಷವು ಇದೇ ಏ.24 ರಂದು ಅರ್ಥಪೂರ್ಣವಾಗಿ ಆಚರಿಸಲಾಗುತ್ತದೆ ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಹೇಳಿದರು.

ಏಪ್ರಿಲ್ 24ರ ಮಂಗಳವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಅಪರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಡಾ.ರಾಜಕುಮಾರ ಜಯಂತಿ ಅರ್ಥಪೂರ್ಣವಾಗಿ ಆಚರಿಸುವ ಕುರಿತು ಸಂಬಧಿಸಿದ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿ ಅವರು ಮಾತನಾಡಿದರು.

ಡಾ. ರಾಜಕುಮಾರ್ ಅಭಿಮಾನಿಗಳನ್ನು ಈ ಕಾರ್ಯಕ್ರಮಕ್ಕೆ ಆಹ್ವಾನಿಸಬೇಕು. ವಿಶೇಷ ಉಪನ್ಯಾಸಕರನ್ನು ಕರೆಸಿ ಡಾ. ರಾಜಕುಮಾರ ಅವರ ಜೀವನ ಹಾಗೂ ಸಾಧನೆಗಳ ಕುರಿತು ವಿಶೇಷ ಉಪನ್ಯಾಸ ನೀಡುವಂತಾಗಬೇಕು. ಪ್ರತಿ ವರ್ಷದಂತೆ ಈ ವರ್ಷ ರಾಯಚೂರು ನಗರದ ಕನ್ನಡ ಭವನದಲ್ಲಿ ಏಪ್ರಿಲ್ 24ರ ಬೆಳಿಗ್ಗೆ 11 ಗಂಟೆಗೆ ಕಾರ್ಯಕ್ರಮ ಅಚ್ಚುಕಟ್ಟಾಗಿ ಆಯೋಜನೆ ಮಾಡಬೇಕು ಎಂದರು.

ಅದು ಬೆಳಿಗ್ಗೆ ಡಾ. ರಾಜಕುಮಾರ ಅವರ ಭಾವಚಿತ್ರಕ್ಕೆ ಪುಷ್ಪ ನಮನ, ಅವರ ಚಲನಚಿತ್ರ ಗೀತೆಗಳ ಗಾಯನ, ಡಾ. ರಾಜಕುಮಾರ ಕುರಿತು ಇತರೆ ಕಾರ್ಯಕ್ರಮಗಳನ್ನು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕನ್ನಡ ಸಾಹಿತ್ಯ ಪರಿಷತ್ ರಾಯಚೂರು ಸೇರಿದಂತೆ ಇತರೆ ಡಾ.ರಾಜಕುಮಾರ ಅಭಿಮಾನಿ ಬಳಗ, ಕಲಾ ತಂಡಗಳ ಸಹಯೋಗದೊಂದಿಗೆ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಆಯೋಜಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ರಾಯಚೂರಿನ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಸುರೇಶ ಜಿ, ವಾರ್ತಾ ಇಲಾಖೆಯ ಸಿಬ್ಬಂದಿಗಳಾದ ಎ.ಪ್ರಕಾಶ್, ರಮೇಶ ಗೌಡೂರು ಜಾಲಹಳ್ಳಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಸಾರ್ವಜನಿಕ ಸ್ಥಳಗಳಲ್ಲಿ ಮಲ, ಮೂತ್ರ ವಿಸರ್ಜನೆ ನಿಷೇಧ: ಜುಬಿನ್ ಮೊಹೊಪಾತ್ರ


ರಾಯಚೂರು ಏಪ್ರಿಲ್ 21

ರಾಯಚೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಯಾವುದೇ ಕಾರಣಕ್ಕೂ ಮಲ, ಮೂತ್ರ ವಿಸರ್ಜನೆ ಮಾಡುವುದನ್ನು ನಿಷೇಧಿಸಲಾಗಿದೆ ಎಂದು ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹೊಪಾತ್ರ ಅವರು ತಿಳಿಸಿದ್ದಾರೆ.

ಕೇಂದ್ರ ಹಾಗೂ ರಾಜ್ಯ ಸರ್ಕಾರದ ಪೌರಾಡಳಿತ ನಿರ್ದೇಶನಾಲಯ ಬೆಂಗಳೂರು ಇವರ ಪತ್ರದನ್ವಯ ಸ್ವಚ್ಛ ಭಾರತ್ ಮಿಷನ್ ಯೋಜನೆಗೆ ಸಂಬಧಿಸಿದತೆ ನೀಡಿರುವ ಮಾರ್ಗ ಸೂಚಿಗಳನ್ವಯ ರಾಯಚೂರು ಮಹಾನಗರ ಪಾಲಿಕೆ ವ್ಯಾಪ್ತಿಯ 35 ವಾರ್ಡಗಳನ್ನು ಓ.ಡಿ.ಎಫ್ (ಬಯಲು ಶೌಚ ಮುಕ್ತ) ನಗರವೆಂದು ಘೋಷಿಸಿ ಪ್ರಮಾಣ ಪತ್ರ ಪಡೆಯಲಾಗಿದೆ. ಅದರಂತೆ ಓ.ಡಿ.ಎಫ್+ ಮರು ಪ್ರಮಾಣೀಕರಣ ಬಯಲು ಶೌಚ ಮುಕ್ತ ನಗರ ಎಂದು 35 ವಾರ್ಡಗಳನ್ನು ಘೋಷಿಸಲಾಗಿದೆ. ಪಾಲಿಕೆಯ ಸಾರ್ವಜನಿಕ ಸ್ಥಳಗಳಲ್ಲಿ ಯಾವುದೇ ಕಾರಣಕ್ಕೂ ಮಲ, ಮೂತ್ರ ವಿಸರ್ಜನೆ ಮಾಡಬಾರದು.

3 ನೇ ಪುಟಕ್ಕೆ

ನೇತಾಜಿನಗರದಲ್ಲಿ ಬಾಲಕನಿಗೆ ನಾಯಿ ಕಚ್ಚಿ ಗಾಯ



ರಾಯಚೂರು,ಏ.21-

ನೇತಾಜಿ ನಗರದಲ್ಲಿ ನಿನ್ನೆ ಬಾಲಕನಿಗೆ ಶ್ವಾನ ಗಂಭೀರ ವಾಗಿ ಗಾಯಗೊಂಡಿದ್ದನು.. ಬಾಲಕ Marzokh S.o.inayath Jhaniya.mohall. janda. katta.netaji.nagar.raichur ಕಣ್ಣಿಗೆ ಕಪಾಳಕ್ಕೆ ಶ್ವಾನ ಕಡಿದ ಪರಿಣಾಮ ತೀವ್ರ ಗಾಯಗೊಂಡಿದ್ದನು.

ಇಂದು ಮಹಾನಗರ ಪಾಲಿಕೆ ವಾರ್ಡ್ ನಂಬರ್ 15 ರ ಸದಸ್ಯರಾದ ಡಾ. ಜೆ. ಸಾಜಿದ ಸಮೀರ್ ಅವರು ರಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿ ಮಗುವಿನ ಆರೋಗ್ಯ ವಿಚಾರಿಸಿದರು. ತಕ್ಷಣ ವೈದ್ಯರನ್ನು ಕರೆಸಿ ಸೂಕ್ತ ಚಿಕಿತ್ಸೆ ನೀಡುವಂತೆ ಮನವಿ ಮಾಡಿದರು. ಬಾಲಕ Marzokh S.o .inayath Jhaniya.mohall. janda.katta.netaji. nagar.raichur ಆರೋಗ್ಯ ವಿಚಾರಿಸಿ ಶೀಘ್ರ ಗುಣಮುಖನಾಗುತ್ತಾನೆ. . ಪಾಲಕರಿಗೆ ಹೆಚ್ಚಿನ ಚಿಕಿತ್ಸೆ ಗೆ ಎಲ್ಲ ರೀತಿಯ ಸಹಕಾರ ಕೊಡುವುದಾಗಿ ಭರವಸೆ ನೀಡಿ ಧೈರ್ಯ ತುಂಬಿದರು.

ಯುವತಿಗೆ ಚುಡಾಯಿಸಿದ ಆರೋಪದಲ್ಲಿ ಯುವಕನನ್ನು ಅಪಹರಿಸಿ ಕೂಡಿ ಹಾಕಿ ಹಲ್ಲೆ

.ರಾಯಚೂರು,ಏ.21-

ಯುವತಿಗೆ ಚುಡಾಯಿಸಿದ್ದಾನೆ ಎಂದು ಆರೋಪಿಸಿ ಯುವಕನೊಬ್ಬನನ್ನು ಅಪಹರಿಸಿ, ಮನೆಯೊಂದರಲ್ಲಿ ಕೂಡಿ ಹಾಕಿ ಹಲ್ಲೆ ನಡೆಸಿರುವ ಘಟನೆ ನಗರದಲ್ಲಿ ನಡೆದಿದ್ದು, ಹಲ್ಲೆಯ ವೀಡಿಯೊ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ.



ಬಜಾರ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ. ನಗರದ ಯರಮರಸ್ ಕ್ಯಾಂಪ್ ನಿವಾಸಿಯಾಗಿರುವ ಮೆಹಬೂಬ್ ಎಂಬ ಯುವಕ ಖಾಸಗಿ ಆಸ್ಪತ್ರೆಯಲ್ಲಿ ಕಚೇರಿ ಸಹಾಯಕ(ವಾರ್ಡ್ ಬಾಯ್) ಆಗಿ ಕೆಲಸ ಮಾಡುತ್ತಿದ್ದು ಅದೇ ಆಸ್ಪತ್ರೆಗೆ ಬಂದ ಯುವತಿಯೊಬ್ಬಳಿಗೆ ಚುಡಾಯಿಸಿದ್ದಾನೆ ಎಂದು ಆರೋಪಿಸಲಾಗಿದೆ. ಇದೇ ಕಾರಣಕ್ಕೆ ಮೆಹಬೂಬ್ ದ್ವಿಚಕ್ರ ವಾಹನದಲ್ಲಿ ಹೋಗುತ್ತಿದ್ದ ವೇಳೆ ಯುವತಿಯ ಕುಟುಂಬಸ್ಥರು, ಕೆಲ ಸ್ನೇಹಿತರು ತಡೆದು ಅಪಹರಿಸಿದ್ದರೆನ್ನಲಾಗಿದೆ.

ಮೆಹಬೂಬ್ ನನ್ನು ಐಡಿಎಸ್ ಎಂಟಿ

3 ನೇ ಪುಟಕ್ಕೆ

ಕಾಂಗ್ರೆಸ್ ಮಹಿಳಾ ಮೀಸಲಾತಿ ಪರ ಇದೆ : ಶ್ರೀದೇವಿ ನಾಯಕ

ರಾಯಚೂರು,ಏ.21-

ಕಾಂಗ್ರೆಸ್ ಪಕ್ಷ ಯಾವಾಗಲೂ ಮಹಿಳಾ ಮೀಸಲಾತಿ ಪರ ಇದೆ. ಭಾರತೀಯ ಜನತಾ ಪಕ್ಷ ಕಾಂಗ್ರೆಸ್ ಪಕ್ಷವನ್ನು ಮಹಿಳಾ ವಿರೋಧಿ ಎಂದು ಬಿಂಬಿಸಲು ಹೊರಟಿದೆ. ಪ್ರಜ್ಞಾವಂತ ನಾಗರಿಕರು ಅದನ್ನು ಅರ್ಥಮಾಡಿ ಕೊಳ್ಳುತ್ತಾರೆ ಎಂದು ಎಐಸಿಸಿ ಮಹಿಳಾ ಘಟಕದ ಕಾರ್ಯದರ್ಶಿ ಶ್ರೀದೇವಿ ಆರ್. ನಾಯಕ ಹೇಳಿದರು.



ನಗರದ ಪತ್ರಿಕಾಭವನದಲ್ಲಿ ಮಂಗಳವಾರ ಕರೆದಿದ್ದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು, 2023 ರಲ್ಲಿ ಮಹಿಳಾ ಮೀಸಲಾತಿ ಮಸೂದೆ ಪಾಸಾಗಿದೆ. ಆದರೆ ಸಂವಿಧಾನಕ್ಕೆ ತಿದ್ದುಪಡಿ ತರುವ ದುರುದ್ದೇಶ, ಕ್ಷೇತ್ರ ವಿಂಗಡನೆಯನ್ನು ಅಳವಡಿಸಿ ಮಹಿಳಾ ಮೀಸಲಾತಿಯ ಮುಖವಾಡ ಧರಿಸಿ ಮಸೂದೆ ಮಂಡಿಸಿದ್ದರ ಪರಿಣಾಮ ಕಾಂಗ್ರೆಸ್ ಸೇರಿದಂತೆ ವಿರೋಧಪಕ್ಷಗಳು ಬಿಜೆಪಿ ಸರಕಾರದ ಕುತಂತ್ರವನ್ನು ಸೋಲಿಸಿವೆ ಎಂದರು.

ಈಗಾಗಲೇ 2023ರಲ್ಲಿ ಮಹಿಳಾ ಮೀಸಲಾತಿ ಮಸೂದೆ ಪಾಸಾಗಿದೆ. 543 ಸಂಸತ್ ಸದಸ್ಯರಿಗನುಗುಣವಾಗಿ ಅದನ್ನು ಕೇಂದ್ರ ಸರಕಾರ ಮೊದಲು ಜಾರಿಗೊಳಿಸಲಿ. ಅದನ್ನು ಬಿಟ್ಟು ತಮಿಳುನಾಡು, ಕೇರಳ, ಪಶ್ಚಿಮ ಬಂಗಾಲ, ಅಸ್ಸಾಂ ಸೇರಿದಂತೆ ಪಂಚ ರಾಜ್ಯಗಳಲ್ಲಿ ಚುನಾವಣೆ ನಡೆಯುತ್ತಿದ್ದು ರಾಜಕೀಯಕ್ಕಾಗಿ ಈಗ ಕಾಂಗ್ರೆಸ್ ಪಕ್ಷದ ಮೇಲೆ ಗೂಬೆ ಕೂರಿಸಲಾಗುತ್ತಿದೆ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ಶಶಿಕಲಾ ಭೀಮರಾಯ, ಮಂಜುಳಾ ಅಮರೇಶ, ಮಾಲಾ ಭಜಂತ್ರಿ ಸೇರಿದಂತೆ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

ಡಾ.ಬಿ.ಆರ್. ಅಂಬೇಡ್ಕರ್‌ರ ಬೃಹತ್ ಮೂರ್ತಿ ಅನಾವರಣ

ಅಂಬೇಡ್ಕರ್ ದಲಿತರ - ಶೋಷಿತರ ದೇವರು -ಆದರ್ಶಗಳನ್ನು ಅಳವಡಿಸಿಕೊಳ್ಳೋಣ- ಶಿವನಗೌಡ ನಾಯಕ

ಸಿರವಾರ,ಏ.21-

ದೇಶದಲ್ಲಿ ಜಾತಿ, ವರ್ಣ ತಾರತಮ್ಯವನ್ನು ಮೆಟ್ಟಿನಿಂತು, ದಲಿತರ, ಶೋಷಿತ ಸಮಾಜದವರಿಗೆ ಬಾಬಾ ಸಾಹೇಬ್ ಅಂಬೇಡ್ಕರ್ ನಿಜವಾದ ದೇವರಾಗಿದ್ದಾರೆ, ಮೂರ್ತಿ ಪ್ರತಿಷ್ಠಾಪನೆಯ ಜತೆಗೆ ಪ್ರತಿಯೊಬ್ಬರೂ ಕೂಡ ಅವರ ತತ್ವ-ಆದರ್ಶಗಳನ್ನು ಅಳವಡಿಸಿಕೊಳ್ಳಬೇಕು ಎಂದು ಮಾಜಿ ಸಚಿವರಾದ ಕೆ.ಶಿವನಗೌಡ ನಾಯಕ ಹೇಳಿದರು.



ತಾಲೂಕಿನ ನವಲಕಲ್ ಗ್ರಾಮದಲ್ಲಿ ಹೈ- ಕ ದಲಿತ ಸಂಘರ್ಷ ಸಮಿತಿ ವತಿಯಿಂದ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ರವರ ಮೂರ್ತಿ ಅನಾವರಣ ಕಾರ್ಯಕ್ರಮ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ ಅವರು ನಾನು ಶಾಸಕ, ಸಚಿವರಾಗಿರುವುದಕ್ಕೆ ಅಂಬೇಡ್ಕರ ಕೊಟ್ಟ ಮಿಸಲಾತಿ ಬಿಕ್ಷೆಯಿಂದ ನಿತ್ಯ ಹೆತ್ತವರ ಜೊತೆ ಅಂಬೇಡ್ಕರ್ ಪೂಜೆ ಮಾಡಬೇಕು. ಏಸುಮಿತ್ರ ಅವರು ಪುತ್ಥಳಿ ನಿರ್ಮಿಸಿ ಇತಿಹಾಸ ನಿರ್ಮಿಸಿದ್ದಾರೆ. ಅಂಬೇಡ್ಕರ್ ಹೆಸರಿನಲ್ಲಿ ಯಾವುದೇ ಕಾರ್ಯ ಮಾಡಿದರೂ ಸಹಾಯ ಸಹಕಾರ ನೀಡುವೆ ಎಂದರು.

ನವಲಕಲ್ ಬೃಹನ್ಮಠದ ಅಭಿನವ ಸೋಮನಾಥ ಶಿವಾಚಾರ್ಯರು ಪುತ್ಥಳಿ ಅನಾವರಣ ಗೊಳಿಸಿ ತಮ್ಮ ಆಶಿರ್ವಚನದಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಹಾಗೂ ಜಗಜ್ಯೋತಿ ಬಸವಣ್ಣನವರ ವಿಚಾರಗಳು ಒಂದೇ ಆಗಿವೆ. ಸಮಾನತೆಯ ಸಂದೇಶಗಳೇ ಅವರಿಬ್ಬರ ಮಂತ್ರವಾಗಿವೆ. ಹಾಗಾಗಿ ಬಸವಣ್ಣ ಮತ್ತು ಅಂಬೇಡ್ಕರ್ ಅವರ

3 ನೇ ಪುಟಕ್ಕೆ

ಪಿಂಜಾರ ನದಾಫ್ ಪ್ರತ್ಯೇಕ ಅಭಿವೃದ್ಧಿ ನಿಗಮ ಮಂಡಳಿ ಸ್ಥಾಪನೆಗೆ ಒತ್ತಾಯ



ರಾಯಚೂರು, ಏ.21-ಪಿಂಜಾರ ನದಾಫ್ ಪ್ರತ್ಯೇಕ ಅಭಿವೃದ್ಧಿ ನಿಗಮ ಮಂಡಳಿ ಕೂಡಲೇ ಸ್ಥಾಪನೆ ಮಾಡಬೇಕೆಂದು ಆಗ್ರಹಿಸಿ ಅಖಿಲ ಕರ್ನಾಟಕ ಪಿಂಜಾರ್ ನದಾಫ್ ಮನ್ಸೂರಿ ಹಕ್ಕುಗಳ ಸಂಘ ಮುಖಂಡರು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನೆ ನಡೆಸಿದರು. ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿ ಒತ್ತಾಯಿಸಿದ್ದಾರೆ.

ಕರ್ನಾಟಕ ರಾಜ್ಯಾದ್ಯಂತ ಸುಮಾರು 35 ರಿಂದ 40 ಲಕ್ಷಗಳ ಜನಸಂಖ್ಯೆ ಹೊಂದಿರುವ ಪಿಂಜಾರ್ ನದಾಫ್

3 ನೇ ಪುಟಕ್ಕೆ

ಪಟ್ಟಣದ ವಿವಿಧ ವಾರ್ಡಗಳಲ್ಲಿ 5ಕೋಟಿ 26 ಲಕ್ಷ ವೆಚ್ಚದಲ್ಲಿ ಕಾಮಗಾರಿಗಳಿಗೆ ಚಾಲನೆ: ಬೋಸರಾಜು

ಮಾನ್ವಿ,ಏ.21-

ಪಟ್ಟಣದ ಪ್ರವಾಸಿ ಮಂದಿರದಲ್ಲಿ ರಾಜ್ಯ ಸಣ್ಣ ನೀರಾವರಿ ಹಾಗೂ ವಿಜ್ಞಾನ ತಂತ್ರಜ್ಞಾನ ಸಚಿವ ಎನ್.ಎಸ್.ಬೋಸರಾಜು ಸುದ್ದಿಗಾರರೊಂದಿಗೆ ಮಾತನಾಡಿ ಪಟ್ಟಣದ ವಿವಿಧ ವಾರ್ಡಗಳಲ್ಲಿ 5ಕೋಟಿ 26 ಲಕ್ಷ ವೆಚ್ಚದಲ್ಲಿ ವಿವಿಧ ಯೋಜನೆಗಳಡಿಯಲ್ಲಿ ಸಮುದಾಯಭವನ ಹಾಗೂ ಲೋಕಪಯೋಗಿ ಇಲಾಖೆಯಿಂದ ರಸ್ತೆ,ಚರಂಡಿ ಕಾಮಗಾರಿಗಳಿಗೆ ಶಾಸಕರೊಂದಿಗೆ ಚಾಲನೆ ನೀಡಲಾಯಿತು. ತಾಲೂಕಿನಲ್ಲಿ ಮಳೆಗಾಲದಲ್ಲಿ ತುಂಬಿ ಹರಿಯುವ ಹಳ್ಳಗಳಿಗೆ ಶಾಶ್ವತವಾದ



ಸೇತುವೆಗಳನ್ನು ನಿರ್ಮಿಸುವುದಕ್ಕೆ ರಾಜ್ಯ ಸರಕಾರದಿಂದ ಅನುದಾನವನ್ನು ಮಂಜೂರು ಮಾಡಿಸಲಾಗಿದು ತಾಲೂಕಿನ ಮುಸ್ಟೂರು ಗ್ರಾಮದ ಹತ್ತಿರದ ಹಳ್ಳಕ್ಕೆ ಶಾಶ್ವತವಾದ ಸೇತುವೆಯನ್ನು ನಿರ್ಮಿಸುವುದಕ್ಕಾಗಿ 11 ಕೋಟಿ ಅನುದಾನ ಬಿಡುಗಡೆಯಾಗಿದೆ. ರಾಜ್ಯ ಹೆದ್ದಾರಿ ರಾಮದುರ್ಗ ಮಾರ್ಗದಲ್ಲಿ ಬರುವ ಜೀನೂರು ಹಾಗೂ ತಡಕಲ್ ಮಧ್ಯದ ಹಳ್ಳಕ್ಕೆ ಶಾಶ್ವತವಾದ ಸೇತುವೆಯನ್ನು ನಿರ್ಮಿಸುವುದಕ್ಕಾಗಿ 5ಕೋಟಿ 50ಲಕ್ಷ , ಬಲ್ಲಟಗಿ ಸೇತುವೆ ದುರಸ್ಥಿಗಾಗಿ 50 ಲಕ್ಷ ಅನುದಾನ ಬಿಡುಗಡೆಯಾಗಿದ್ದು ತಾಲೂಕಿನಲ್ಲಿ ಒಟ್ಟು 17 ಕೋಟಿ ವೆಚ್ಚದ ಲೋಕಪಯೋಗಿ ಇಲಾಖೆ ಕಾಮಗಾರಿಗಳಿಗೆ ಟೆಂಡರ್ ಕರೆಯಲಾಗುವುದು. ತಾಲೂಕಿನಲ್ಲಿ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಅಗತ್ಯವಾದ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗಿದು ಜಲಾಶಯದಿಂದ ಕಾಲುವೆ ಮೂಲಕ ತಾಲೂಕಿನ ಎಲ್ಲಾ 18 ಕೆರೆಗಳನ್ನು ತುಂಬಿಸಲಾಗಿದೆ ಮಾನ್ವಿ ಪುರಸಭೆಯಿಂದ ರಬ್ಬಣಕಲ್ ಕೆರೆಯಲ್ಲಿ ಇದುವರೆಗೆ 7.5 ಮೀಟರ್ ವರೆಗೆ ನೀರನ್ನು ಸಂಗ್ರಹಿಸಲಾಗಿದೆ. ಪಟ್ಟಣದಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗಾಗಿ ಜೆ.ಜೆ.ಎಂ. ಹಾಗೂ ಅಮೃತ -2 ಕಾಮಗಾರಿಯನ್ನು ಕೈಗೊಳ್ಳಾಗಿದು, ಕಾತರಕಿ ಗ್ರಾಮದ ತುಂಗಭದ್ರನದಿಯಲ್ಲಿ ಹೊಸ ಜಾಕ್‌ವೆಲ್ ಹಾಗೂ ಮೋಟರ್ ಗಳನ್ನು ಅಳವಡಿಸಿ ನದಿ ನೀರನ್ನು ಶುದ್ದಿಕಾರಿಸಿ ಪಟ್ಟಣಕ್ಕೆ ಪೂರೈಕೆ ಮಾಡಲಾಗುತ್ತಿದೆ.ಮುಂದಿನ ಬೇಸಿಗೆಗೆ ಕುಡಿಯುವ ನೀರಿನ ಸಮಸ್ಯೆ ಇಲ್ಲಾದಂತೆ ಅಗತ್ಯವಾದ ಪೈಪ್ ಲೈನ್ ಅಳವಡಿಕೆ ಕಾಮಗಾರಿ ಪ್ರಗತಿಯಲ್ಲಿದೆ. ಮುಖ್ಯಮಂತ್ರಿಗಳು ಕುಡಿಯುವ ನೀರಿನ ಸಮಸ್ಯೆ ನಿವಾರಣೆಗಾಗಿ ಜಿಲ್ಲಾಧಿಕಾರಿಗಳ

3 ನೇ ಪುಟಕ್ಕೆ

ಬಸವೇಶ್ವರರ ಕಾಯಕ ಶ್ರೇಷ್ಠತೆ ಜಗತ್ತಿಗೆ ಮಾದರಿ: ಬಿ.ಜಿ.ಪಾಟೀಲ್



ಕಲಬುರಗಿ,ಏ.21

ಜಗಜ್ಯೋತಿ ಬಸವೇಶ್ವರರ ಕಾಯಕ ತತ್ವ ಜಗತ್ತಿಗೆ ಮಾದರಿಯಾಗಿದ್ದು, 12ನೇ ಶತಮಾನದಲ್ಲೇ ಸಮಾನತೆಯ ಸಮಾಜ ನಿರ್ಮಾಣಕ್ಕೆ ಶ್ರಮಿಸಿದ ಬಸವಣ್ಣ ಒಬ್ಬ ಶ್ರೇಷ್ಠ ಸಮಾಜ ಸುಧಾರಕರಾಗಿದ್ದಾರೆ ಎಂದು ವಿಧಾನ ಪರಿಷತ್ ಸದಸ್ಯ ಡಾ. ಬಿ. ಜಿ. ಪಾಟೀಲ ಅಭಿಪ್ರಾಯಪಟ್ಟರು.

ಗುಲ್ಬರ್ಗಾ ವಿಶ್ವವಿದ್ಯಾಲಯದ ಮಹಾತ್ಮ ಗಾಂಧಿ ಸಭಾಂಗಣದಲ್ಲಿ ಡಾ. ಗಳಂಗಳಪ್ಪ ಪಾಟೀಲ (ಎಸ್. ಬಿ. ಪಾಟೀಲ) ಬಸವಾದಿ ಶರಣ ಸಾಹಿತ್ಯ ಕೇಂದ್ರ ಆಯೋಜಿಸಿದ್ದ ಸಮಾಜ ಸುಧಾರಕ, ದಾರ್ಶನಿಕ ಮತ್ತು ಸಾಂಸ್ಕೃತಿಕ ನಾಯಕ ಶ್ರೀ ಜಗಜ್ಯೋತಿ ಬಸವೇಶ್ವರರ 893ನೇ ಜಯಂತ್ಯೋತ್ಸವದಲ್ಲಿ ಅವರು ಬಸವೇಶ್ವರರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ ಮಾತನಾಡಿದರು.

ಗುಲ್ಬರ್ಗಾ ವಿಶ್ವವಿದ್ಯಾಲಯವು ಬಸವಾದಿ ಶರಣ ಸಾಹಿತ್ಯ ಕೇಂದ್ರದ ಕಟ್ಟಡ ನಿರ್ಮಾಣಕ್ಕಾಗಿ ಎರಡು ಎಕರೆ ಜಾಗ ನೀಡಿದ್ದು, ಅದರ ಅಭಿವೃದ್ಧಿಗೆ ಸಂಪೂರ್ಣ ಸಹಕಾರ ನೀಡಲಾಗುವುದು. ಮುಂದಿನ ದಿನಗಳಲ್ಲಿ ಶರಣರ ಜಯಂತಿಗಳ ಜೊತೆಗೆ ವಿಶೇಷ ಉಪನ್ಯಾಸ ಹಾಗೂ ವಿಚಾರ ಸಂಕಿರಣಗಳನ್ನು ಆಯೋಜಿಸಿದರೆ ಅಗತ್ಯ ಆರ್ಥಿಕ ನೆರವು ನೀಡಲಾಗುವುದು ಎಂದು ಅವರು ಭರವಸೆ ನೀಡಿದರು.

ಡಾ. ಬಿ.ಡಿ. ಜತ್ತಿ ವಚನ ಅಧ್ಯಯನ ಕೇಂದ್ರದ ಉಪನ್ಯಾಸಕ ಡಾ. ಆನಂದ ಸಿದ್ಧಾಮಣಿ ಮಾತನಾಡಿ, ಬಸವಣ್ಣನವರ ವಚನ ಚಳವಳಿ ದೇಶ ವಿದೇಶಗಳ ಮೇಲೆ ಗಾಢ ಪ್ರಭಾವ ಬೀರಿದೆ. ಅವರ ವಚನಗಳು ಜನಮನದಲ್ಲಿ ಅಚ್ಚಳಿಯದೆ ಉಳಿದು ವ್ಯಕ್ತಿತ್ವ ವಿಕಸನಕ್ಕೆ ಪ್ರೇರಣೆಯಾಗುತ್ತಿವೆ ಎಂದು ಹೇಳಿದರು. ಕಾಯಕ ಸಿದ್ಧಾಂತವು ಸಮಾಜದಲ್ಲಿ ಅರಿವು, ಸಮಾನತೆ, ಜಾತಿ ನಿರಾಕರಣೆ ಮತ್ತು ಸ್ತ್ರೀ ಸಮಾನತೆಯನ್ನು ಪ್ರತಿಪಾದಿಸುತ್ತದೆ ಎಂದರು.

ಗುಲ್ಬರ್ಗಾ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಶಶಿಕಾಂತ ಎಸ್. ಉಡಿಕೇರಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಬಸವಾದಿ ಶರಣರು ಜಾತಿ, ಲಿಂಗ, ವೃತ್ತಿ ಬೇಧವಿಲ್ಲದ ಸಮಾನತೆಯ ಸಮಾಜವನ್ನು ಪ್ರತಿಪಾದಿಸಿದರು. ''ಕಾಯಕವೇ ಶಕ್ತಿ ಮತ್ತು ಮುಕ್ತಿ'' ಎಂಬ ತತ್ವದ ಮೂಲಕ ಕಂದಾಚಾರ, ಮೂಢನಂಬಿಕೆ, ವ್ಯಕ್ತಿ ಪೂಜೆ ಹಾಗೂ ಮೂರ್ತಿ ಪೂಜೆಯನ್ನು ವಿರೋಧಿಸಿ ಜ್ಞಾನ, ಕಾಯಕ ಮತ್ತು ದಾಸೋಹ ಪರಂಪರೆಯನ್ನು ಉತ್ತೇಜಿಸಿದರು ಎಂದು ಹೇಳಿದರು.

ಬಸವಾದಿ ಶರಣ ಕೇಂದ್ರದ ನಿರ್ದೇಶಕ ಹಾಗೂ ಬಸವ ಜಯಂತಿ ಸಂಚಾಲಕ ಪ್ರೊ. ಎಸ್.ಎಮ್. ಹನಗೋಡಿಮಠ ಅತಿಥಿ ಗಣ್ಯರನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಸಿಂಡಿಕೇಟ್ ಸದಸ್ಯ ಸಿದ್ದಪ್ಪ ಸುಳ್ಳದ್, ಬಸವಾದಿ ಶರಣ ಸಾಹಿತ್ಯ ಕೇಂದ್ರದ ಸಲಹಾ ಸಮಿತಿಯ ಖಾಯಂ ಸದಸ್ಯ ಬಂಡೆಪ್ಪ ಕೆಸೂರ, ಮೌಲ್ಯಮಾಪನ ಕುಲಸಚಿವ ಡಾ. ಎನ್.ಜಿ. ಕಣ್ಣೂರ, ವಿತ್ತಾಧಿಕಾರಿ ಜಯಂಬಿಕ, ಕುಲಸಚಿವ ಪ್ರೊ.ರಮೇಶ ಲಂಡನಕರ್ ಉಪಸ್ಥಿತರಿದ್ದರು.

ಗುಲ್ಬರ್ಗಾ ವಿಶ್ವವಿದ್ಯಾಲಯದ ವಿವಿಧ ನಿಕಾಯದ ಡೀನರು, ಸಿಂಡಿಕೇಟ್ ಸದಸ್ಯರು, ವಿದ್ಯಾ ವಿಷಯಕ ಪರಿಷತ್ ಸದಸ್ಯರು, ಸ್ನಾತಕೋತ್ತರ ವಿಭಾಗಗಳ ಮುಖ್ಯಸ್ಥರು, ಪ್ರಾಧ್ಯಾಪಕರು, ಅತಿಥಿ ಉಪನ್ಯಾಸಕರು, ಬೋಧಕೇತರ ಸಿಬ್ಬಂದಿಗಳು, ಸಂಶೋಧನಾ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳು ಸೇರಿದಂತೆ ನಗರದ ನಾಗರೀಕರು ಭಾಗವಹಿಸಿದ್ದರು.

ಸಂಗೀತ ವಿಭಾಗದ ಅತಿಥಿ ಉಪನ್ಯಾಸಕರು ನಾಡಗೀತೆಯೊಂದಿಗೆ ಡಾ. ಲಕ್ಷ್ಮಿ ಶಂಕರ್ ಜೋಷಿ, ಸುನೀತಾ ಜಟಕೀರ್, ಡಾ.ಜಯಾ ಡಿ. ದಾನಮ್ಮ ಬಸವಣ್ಣನವರ ವಚನ ಗಾಯನ ಪ್ರಸ್ತುತಪಡಿಸಿದರು. ಡಾ. ಚಂದ್ರಕಾತ ಬಿರಾದಾರ ಅತಿಥಿ ಪರಿಚಯಿಸಿ ವಂದಿಸಿದರು. ಡಾ. ಎಂ. ಬಿ. ಕಟ್ಟಿ ಕಾರ್ಯಕ್ರಮ ನಿರ್ವಹಿಸಿದರು.

ಜಗತ್ತಿನಲ್ಲಿ ಪ್ರತಿ ಮೂಲೆ ಮೂಲೆಗಳಲ್ಲಿ ಅಶಾಂತಿಯಿದೆ. ಜಾತಿ, ಅನ್ಯಾಯ, ಸಂಘರ್ಷ, ಅಸಮಾನತೆ, ಶೋಷಣೆ, ಮಹಿಳಾ ದೌರ್ಜನ್ಯ, ಬಿಕ್ಕಟ್ಟುಗಳು ಸಮಾಜವನ್ನು ಬಾದಿಸುತ್ತಿವೆ. ಬಲಿಷ್ಟ ರಾಷ್ಟ್ರಗಳು ಶಕ್ತಿ ಮತ್ತು ಪ್ರಾಬಲ್ಯ ತೋರಿಸಲು ಯುದ್ಧವೊಂದೇ ಪರಿಹಾರ ಎಂಬ ನಿರ್ಧಾರದಿಂದ ಜನರು ಭಯ ಮತ್ತು ಆತಂಕದಲ್ಲಿ ಜೀವನ ಕಳೆಯುವಂತಾಗಿದೆ. ಇಂತಹ ಸಂದಿಗ್ಧ ಪರಿಸ್ಥಿತಿಯಲ್ಲಿ ಬಸವಣ್ಣನವರ ಸರ್ವರಿಗೂ ಸಮ ಬಾಳು ಸರ್ವರಿಗೂ ಸಮಪಾಲು ಎಂಬ ವಚನ ಸಂದೇಶದಲ್ಲಿ ಎಲ್ಲಾ ಬಿಕ್ಕಟ್ಟುಗಳ ಸುಧಾರಣೆಗೆ ಉತ್ತರವಿದೆ. ಸಕಲರಿಗೂ ಅರ್ಥವಾಗುವಂತಹ ಸುಲಭ, ಸರಳ, ನೇರ ಮತ್ತು ತೀಕ್ಷ್ಣ ವಚನಗಳನ್ನು ಅರ್ಥೈಸಿಕೊಂಡು ಪಾಲಿಸಿದರೆ ಎಂತಹ ಗಂಭೀರ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಬಹುದು.

- ಪ್ರೊ. ಶಶಿಕಾಂತ್ ಎಸ್. ಉಡಿಕೇರಿ, ಕುಲಪತಿಗಳು, ಗುಲ್ಬರ್ಗಾ ವಿಶ್ವವಿದ್ಯಾಲಯ



ಹೊಸಪೇಟೆ ಸ್ಲಂನಲ್ಲಿ ಬಸವ ಜಯಂತಿ ಆಚರಣೆ

ವಿಜಯನಗರ, ಏ.21

ಸ್ಲಂ ಜನರ ಸಂಘಟನೆ ಕರ್ನಾಟಕ ವಿಜಯನಗರ ಜಿಲ್ಲಾ ಸಮಿತಿ ವತಿಯಿಂದ ಹೊಸಪೇಟೆಯ ಪ್ರೇಮನಗರ ಸ್ಲಂನಲ್ಲಿ ವಿಶ್ವಗುರು ಜಗಜ್ಯೋತಿ ಬಸವಣ್ಣನವರ ಜಯಂತೋತ್ಸವವನ್ನು ಸರಳವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಬಸವ ಬಳಗದ ಉಪಾಧ್ಯಕ್ಷರಾದ ಮಧುರ ಚೆನ್ನ ಶಾಸ್ತ್ರಿ ಅವರು ಬಸವಣ್ಣನವರ ಜೀವನ ಮತ್ತು ತತ್ವಗಳ ಕುರಿತು ಉಪನ್ಯಾಸ ನೀಡಿದರು. 12ನೇ ಶತಮಾನದಲ್ಲೇ ಸಮಾನತೆ, ಜಾತಿಭೇದರಹಿತ ಸಮಾಜ ಮತ್ತು ಕಾಯಕವೇ ಕೈಲಾಸ ಎಂಬ ತತ್ವಗಳನ್ನು ಸಾರಿದ ಮಹಾನ್ ಚಿಂತಕರಾಗಿ ಬಸವಣ್ಣನವರ ಪಾತ್ರವನ್ನು ಅವರು ವಿವರಿಸಿದರು.

ಬಸವಣ್ಣನವರು ಕೂಡಲಸಂಗಮದಲ್ಲಿ ಅಧ್ಯಯನ ನಡೆಸಿ, ದೇವರು ಮಾನವನೊಳಗೇ ಇದ್ದಾನೆ ಎಂಬ ಆತ್ಮತತ್ತ್ವವನ್ನು ಬೋಧಿಸಿದರು ಎಂದು ಅವರು ಹೇಳಿದರು. ಸಮಾನತೆ ಮತ್ತು ಕಾಯಕನಿಷ್ಠೆಯ ಮೂಲಕ ಯಾರೇ ಬೇಕಾದರೂ ಶಿವಶರಣರಾಗಬಹುದು ಎಂಬ ಸಂದೇಶ ಇಂದಿಗೂ ಪ್ರಸ್ತುತವಾಗಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಬಸವಣ್ಣನವರ ವಚನಗಳ ಮೂಲಕ ಸಮಾಜದಲ್ಲಿ ಕ್ರಾಂತಿಕಾರಿ ಬದಲಾವಣೆ ತರಲು ಅವರು ಶ್ರಮಿಸಿದ ವಿಷಯವನ್ನು ಹಾಗೂ ಕನ್ನಡ ಸಾಹಿತ್ಯಕ್ಕೆ ನೀಡಿದ ಕೊಡುಗೆಯನ್ನು ಕೂಡ ಸ್ಮರಿಸಲಾಯಿತು.

ಈ ಸಂದರ್ಭದಲ್ಲಿ ಸ್ಲಂ ಸಂಘದ ಉಪಾಧ್ಯಕ್ಷ ತನ್ವೀರ್ ಅಹ್ಮದ್, ಪ್ರಧಾನ ಕಾರ್ಯದರ್ಶಿ ಎನ್.ವೆಂಕಟೇಶ್, ಸಂಘಟನಾ ಕಾರ್ಯದರ್ಶಿ ಗುತ್ತಿ ಕೈಲಾಸ್, ಖಜಾಂಚಿ ಕೃಷ್ಣ, ಮಹಿಳಾ ಘಟಕದ ಅಧ್ಯಕ್ಷೆ ಹುಲಿಗೆಮ್ಮ, ಉಪಾಧ್ಯಕ್ಷೆ ನೂರ್ ಜಹಾನ್ ಹಾಗೂ ಮುಖಂಡರಾದ ಶೇಖ್ ಮೆಹಬೂಬ್ ಬಾಷಾ, ಪಾಂಡು ನಾಯ್ಕ್, ಮಲ್ಲಿ, ನಾಗರಾಜ್, ಮಾಬಾಷ, ಹನೀಫ್, ಪದ್ಮಾವತಿ, ಲಕ್ಷ್ಮಿ, ಬಾನು, ಪರ್ವೀನ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.



ಕುಕನೂರಿನಲ್ಲಿ 893ನೇ ಬಸವ ಜಯಂತಿ ಆಚರಣೆ

ಕುಕನೂರು, ಏ.21

ಸಮಾನತೆ ಹರಿಕಾರ, ಕಾಯಕವೇ ಕೈಲಾಸದ ತತ್ವದ ಪ್ರತಿಪಾದಕ ಬಸವಣ್ಣನವರ 893 ನೇ ಜಯಂತಿಯನ್ನು ಸೋಮವಾರ ಪಟ್ಟಣದಲ್ಲಿ ಸಂಭ್ರಮದೊಂದಿಗೆ ಆಚರಿಸಲಾಯಿತು.

ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳು ಎಂಬ ಸಮಾನತೆಯ ಸಂದೇಶ ಸಾರುವ ಬಸವಣ್ಣನ ಭಾವಚಿತ್ರಗಳನ್ನು ವಿವಿಧೆಡೆ ಪ್ರದರ್ಶಿಸಿ ಗೌರವಿಸಲಾಯಿತು.

ಬಸವಣ್ಣನವರ ಜೀವನ, ಸಾಧನೆ ಮತ್ತು ಸಮಾಜ ಪರಿವರ್ತನೆಗೆ ನೀಡಿದ ಕೊಡುಗೆಗಳನ್ನು ಪ್ರತಿಬಿಂಬಿಸುವ ಸ್ತಬ್ಧಚಿತ್ರಗಳ ಪ್ರದರ್ಶನ ಗಮನ ಸೆಳೆಯಿತು. ಅಂತರ್ಜಾತಿ ವಿವಾಹ, ಸ್ತ್ರೀ ಸಮಾನತೆ, ಕಾಯಕವೇ ಕೈಲಾಸ, ಜಾತ್ಯತೀಯತೆ ಮೊದಲಾದ ಮೌಲ್ಯಗಳನ್ನು ಸಾರುವ ದೃಶ್ಯಾವಳಿಗಳು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿತು.

ಕಾರ್ಯಕ್ರಮದ ಅಂಗವಾಗಿ ಭಕ್ತರು ಹಾಗೂ ವಿವಿಧ ಸಂಘಟನೆಗಳ ಸದಸ್ಯರು ಬಸವಣ್ಣನ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ, ಅವರ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಸಂಕಲ್ಪ ಮಾಡಿದರು. ಕೆಲವೆಡೆ ಭಜನೆ, ಜಾಥಾ ಹಾಗೂ ಪ್ರವಚನಗಳ ಮೂಲಕ ಬಸವ ಸಂದೇಶವನ್ನು ಹರಡಲಾಯಿತು.

ಈ ಸಂದರ್ಭದಲ್ಲಿ ಯುವ ಮುಖಂಡ ಸಂಗಮೇಶ್ ಗುತ್ತಿ ಮಾತನಾಡಿ, ''ನೈತಿಕ ಅಧಃಪತನದಿಂದ ನರಳುತ್ತಿರುವ ಇಂದಿನ ಸಮಾಜಕ್ಕೆ ಬಸವಣ್ಣನ ತತ್ವಗಳು ದಾರಿದೀಪವಾಗಿವೆ. ಸಮಾನತೆ, ಶ್ರಮದ ಗೌರವ ಮತ್ತು ಸಹೋದರತ್ವದ ಸಂದೇಶಗಳನ್ನು ಪ್ರತಿಯೊಬ್ಬರೂ ತಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು'' ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ರವಿ ನಾಲ್ವಡ್, ಮಂಜುನಾಥ್ ಗದಗಿನ, ಬಸವರಾಜ ಮಂಡಲಗಿರಿ, ರವಿ ಗದಿಗಿನ, ಡಾ. ಜಂಬಣ್ಣ ಅಂಗಡಿ, ಶರಣಪ್ಪ ಗುತ್ತಿ, ಈಶಪ್ಪ ನಾಲ್ವಾಡ, ಜಗದೀಶ್ ಜವಳಿ, ದ್ಯಾಮಣ್ಣ ಜಮಖಂಡಿ, ನಿಂಗಪ್ಪ ಗೊರ್ಲೆಕೊಪ್ಪ, ಶೇಖಪ್ಪ ಕಂಬಳಿ, ಮಲ್ಲಪ್ಪ ಯಕ್ಲಾಸ್ಪುರ್ ವೀರೇಶ್ ಎಕ್ಲಾಸ್ಪುರ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಬಸವಣ್ಣನವರ ತತ್ವಗಳು ಸಮಾಜಕ್ಕೆ ದಾರಿದೀಪ



ಕಲಬುರಗಿ,ಏ.21

ಸಮಾನತೆ ಮತ್ತು ಸಾಮಾಜಿಕ ನ್ಯಾಯದ ನವ ಸಮಾಜ ನಿರ್ಮಾಣಕ್ಕೆ ಶ್ರಮಿಸಿದ ಬಸವಣ್ಣನವರ ತತ್ವಗಳು ಇಂದಿಗೂ ದಾರಿದೀಪವಾಗಿವೆ ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವ ಡಾ. ಶರಣಪ್ರಕಾಶ ಪಾಟೀಲ ಹೇಳಿದರು.

ಸೋಮವಾರ ನಗರದ ಜಗತ್ ವೃತ್ತದ ಬಸವೇಶ್ವರ ಪುತ್ಥಳಿ ಆವರಣದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಪಂಚಾಯತ್ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ವಿಶ್ವಗುರು ಬಸವಣ್ಣನವರ 893ನೇ ಜಯಂತ್ಯುತ್ಸವವನ್ನು ಉದ್ಘಾಟಿಸಿ ಅವರು ಮಾತನಾಡಿದರು.

12ನೇ ಶತಮಾನದಲ್ಲಿ ಬಸವಣ್ಣ ಸ್ಥಾಪಿಸಿದ ಅನುಭವ ಮಂಟಪವು ಮುಕ್ತ ಚರ್ಚೆ ಮತ್ತು ಸಮಾನತೆಯ ಆಧಾರದ ಮೇಲೆ ನಿರ್ಮಿತವಾಗಿದ್ದು, ಅದನ್ನು ವಿಶ್ವದ ಮೊದಲ ಸಂಸತ್ತು ಎಂದು ಕರೆಯಬಹುದು ಎಂದು ಅವರು ಹೇಳಿದರು. ಕೆಳವರ್ಗದವರು, ಶೋಷಿತರು ಮತ್ತು ಮಹಿಳೆಯರಿಗೆ ಸಮಾನ ಗೌರವ ನೀಡುವ ಮೂಲಕ ಬಸವಣ್ಣ ಕ್ರಾಂತಿಕಾರಿ ಬದಲಾವಣೆಗೆ ಕಾರಣರಾದರು ಎಂದು ತಿಳಿಸಿದರು.

ಅನುಭವ ಮಂಟಪದಲ್ಲಿ ಶರಣರ ವಚನಗಳು ಚರ್ಚೆಯಾಗಿ, ಎಲ್ಲರ ಒಪ್ಪಿಗೆಯ ನಂತರವೇ ಅಂಗೀಕಾರವಾಗುತ್ತಿತ್ತು. ''ನುಡಿದಂತೆ ನಡೆದ ಶರಣರ ತತ್ವಗಳು ಇಂದಿಗೂ ಪ್ರಸ್ತುತವಾಗಿವೆ. ಆಯ್ದಕ್ಕಿ ಲಕ್ಕಮ್ಮ, ಸತ್ಯಕ್ಕನಂತಹ ಶರಣೆಯರ ವಚನಗಳು ನೈತಿಕ ಶಕ್ತಿಯನ್ನು ತುಂಬುತ್ತವೆ'' ಎಂದು ಹೇಳಿದರು. ಬಸವಣ್ಣನವರ ತತ್ವಗಳನ್ನು ಕೇವಲ ಭಾಷಣಕ್ಕೆ ಸೀಮಿತಗೊಳಿಸದೆ ಜೀವನದಲ್ಲಿ ಅಳವಡಿಸಿಕೊಳ್ಳುವುದು ಅಗತ್ಯವಾಗಿದೆ ಎಂದರು.

ಬಸವ ಜಯಂತ್ಯುತ್ಸವದ ಅಧ್ಯಕ್ಷ ಹಾಗೂ ಆಳಂದ ಶಾಸಕ ಬಿ. ಆರ್. ಪಾಟೀಲ್ ಅವರು ಮಾತನಾಡಿ, ಇಂದಿನ ಜಗತ್ತಿನ ಹಸಿವು, ಅಶಾಂತಿ ಮತ್ತು ಅಸಮಾನತೆಗಳಿಗೆ ಬಸವ ತತ್ವವೇ ಪರಿಹಾರವಾಗಿದೆ. ಬಸವಣ್ಣ ವಿಶ್ವದ ಮೊದಲ ಸಮಾಜವಾದಿ ಎಂದು ಹೇಳಿದರು.

ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ್ ಅವರು ಮಾತನಾಡಿ, ಅನುಭವ ಮಂಟಪದ ಮೂಲಕ ಬಸವಣ್ಣ ಸಮಾನತೆಯ ಸಂದೇಶ ಸಾರಿದರು. ಬಿದ್ದವರನ್ನು ಮೇಲೆತ್ತುವ ಕಾರ್ಯವೇ ನಿಜವಾದ ಬಸವ ತತ್ವ ಎಂದು ಹೇಳಿದರು. ಸಮಾಜದಲ್ಲಿ ಸ್ತ್ರೀ ಸಮಾನತೆ, ಅಸ್ಪೃಶ್ಯತೆ ನಿವಾರಣೆ ಮತ್ತು ಕಾಯಕ ಧರ್ಮದ ಮಹತ್ವವನ್ನು ಬಸವಣ್ಣ ಪ್ರತಿಪಾದಿಸಿದ್ದಾರೆ ಎಂದು ಹೇಳಿದರು.

ಹಂಪಿ ಕನ್ನಡ ವಿಶ್ವವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕ ಡಾ. ಟಿ. ಆರ್. ಚಂದ್ರಶೇಖರ್ ಅವರು ಉಪನ್ಯಾಸ ನೀಡಿ, ಅನುಭವ ಮಂಟಪವು ಇಂದಿನ ಸಂಸದೀಯ ವ್ಯವಸ್ಥೆಗೆ ಬುನಾದಿಯಾಗಿದೆ ಎಂದು ಹೇಳಿದರು. ವಚನ ಚಳವಳಿ ಸಮಾನತೆ, ಹಕ್ಕುಗಳು ಮತ್ತು ಸಂವಾದದ ಪರಂಪರೆಯನ್ನು ರೂಪಿಸಿದೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಹಿರಿಯ ಸಾಹಿತಿ ಪ್ರೊ. ಆರ್. ಕೆ. ಹುಡುಗಿ ಅವರಿಗೆ ಬಸವಶ್ರೀ ಪ್ರಶಸ್ತಿ ಹಾಗೂ 1 ಲಕ್ಷ ರೂ. ನಗದು ನೀಡಿ ಗೌರವಿಸಲಾಯಿತು. ಪಿಯುಸಿಯಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದ ಸೃಷ್ಟಿ ಪಾಟೀಲ್ ಅವರಿಗೆ 1 ಲಕ್ಷ ರೂ. ಪ್ರೋತ್ಸಾಹಧನ ನೀಡಿ ಸನ್ಮಾನಿಸಲಾಯಿತು. ಸಮಾಜ ಸೇವಕರಾದ ಉಮೇಶ್ ಶೆಟ್ಟಿ ಹಾಗೂ ದುಲಂಗೆ ಅವರಿಗೂ ಗೌರವ ಸಮರ್ಪಿಸಲಾಯಿತು.

ಶ್ರೀ ಶರಣಬಸವೇಶ್ವರ ಸಂಸ್ಥಾನ ಮಾತೋಶ್ರೀ ಡಾ. ದಾಕ್ಷಾಯಿಣಿ ಅಪ್ಪ ಅವರು ಷಟಸ್ಥಲ ಧ್ವಜಾರೋಹಣ ನೆರವೇರಿಸಿದರು. ಗಣ್ಯರು ಹಾಗೂ ಹೆಲಿಕ್ಯಾಪ್ಟರ್ ಮೂಲಕ ಬಸವೇಶ್ವರ ಪುತ್ಥಳಿಗೆ ಪುಷ್ಪಾರ್ಚನೆ ಸಲ್ಲಿಸಲಾಯಿತು.

ವಿಧಾನ ಪರಿಷತ್ ಸದಸ್ಯ ಬಿ.ಜಿ. ಪಾಟೀಲ, ಶಶೀಲ್ ನಮೋಶಿ, ತಿಪ್ಪಣ್ಣಪ್ಪ ಕಮಕನೂರ, ಜಗದೇವ ಗುತ್ತೇದಾರ್, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷರಾದ ಶರಣು ಮೋದಿ, ಜಿಲ್ಲಾಧಿಕಾರಿ ಬಿ. ಫೌಝಿಯಾ ತರನ್ನವ್, ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ್ ಶಿಂಧೆ, ಅಪಾರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಸಹಾಯಕ ಆಯುಕ್ತೆ ಸಾಹಿತ್ಯ ಆಲದ್ ಕಟ್ಟಿ ಸೇರಿದಂತೆ ಜಿಲ್ಲಾ ವೀರಶೈವ ಸಮಾಜದ ಅಧ್ಯಕ್ಷ ಅರುಣಕುಮಾರ ಪಾಟೀಲ್ ಆರ್.ಜಿ. ಶೆಟಗಾರ, ರವೀಂದ್ರ ಶಾಬಾದಿ ಅಧಿಕಾರಿಗಳು ಮತ್ತು ಸಮಾಜದ ಮುಖಂಡರು ಉಪಸ್ಥಿತರಿದ್ದರು.

ಕಲ್ಯಾಣ ಕ್ರಾಂತಿ ಇಂದಿನ ಆಧುನಿಕ ಸಮಾಜಕ್ಕೂ ಪ್ರಸ್ತುತ : ಸಚಿವ ಈಶ್ವರ್ ಖಂಡ್ರೆ



ಬೀದರ್, ಏ.21

12ನೇ ಶತಮಾನದಲ್ಲಿ ಬಸವಣ್ಣನವರು ನಡೆಸಿದ ಕಲ್ಯಾಣ ಕ್ರಾಂತಿ ಇಂದಿನ ಆಧುನಿಕ ಸಮಾಜಕ್ಕೂ ಅತ್ಯಂತ ಪ್ರಸ್ತುತವಾಗಿದೆ ಎಂದು ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ, ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ಚನ್ನಬಸವ ಪಟ್ಟದೇವರ ರಂಗಮಂದಿರದಲ್ಲಿ ಸೋಮವಾರ ಆಯೋಜಿಸಿದ ಸಾಂಸ್ಕೃತಿಕ ನಾಯಕ ಬಸವಣ್ಣನವರ ಜಯಂತ್ಯೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಯಾರು ಮೇಲಲ್ಲ, ಯಾರು ಕೀಳಲ್ಲ ಎಂಬ ತತ್ವದಡಿ ಜಾತಿರಹಿತ, ಲಿಂಗಭೇದವಿಲ್ಲದ ಸಮ ಸಮಾಜ ಕಟ್ಟಲು ಬಸವಣ್ಣನವರು ಶ್ರಮಿಸಿದ್ದರು. ಮೌಢ್ಯತೆ, ಕಂದಾಚಾರ ಮತ್ತು ಅಸ್ಪೃಶ್ಯತೆಯ ವಿರುದ್ಧ ಅವರು ಅಂದೇ ಸಮರ ಸಾರಿದ್ದರು. ಇಂದಿಗೂ ಸಮಾಜದಲ್ಲಿ ನೆಲೆಸಿರುವ ಅಸಮಾನತೆಯನ್ನು ಹೋಗಲಾಡಿಸಲು ಬಸವ ತತ್ವವೇ ಮದ್ದಾಗಿದೆ ಎಂದರು.

ಜಗತ್ತಿನಲ್ಲಿ ಮೊಟ್ಟಮೊದಲ ಬಾರಿಗೆ ಮಹಿಳೆಯರಿಗೆ ಸಮಾನ ಗೌರವ ಮತ್ತು ಹಕ್ಕನ್ನು ನೀಡಿದ ಕೀರ್ತಿ ಬಸವಣ್ಣನವರಿಗೆ ಸಲ್ಲುತ್ತದೆ. ಆದರೆ, ಇಂದಿನ ದಿನಗಳಲ್ಲಿ ಮಹಿಳೆಯರ ಮೇಲಾಗುತ್ತಿರುವ ದೌರ್ಜನ್ಯ ಮತ್ತು ಅತ್ಯಾಚಾರಗಳನ್ನು ಗಮನಿಸಿದರೆ, ನಾವು ಬಸವ ತತ್ವದಿಂದ ದೂರ ಸರಿಯುತ್ತಿದ್ದೇವೆಯೇ ಎಂಬ ಪ್ರಶ್ನೆ ಕಾಡುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಯುವಜನತೆ ಮತ್ತು ಸಾಮಾಜಿಕ ಮಾಧ್ಯಮಗಳ ಪ್ರಭಾವ ಇಂದಿನ ಯುವ ಪೀಳಿಗೆಯ ವಿದ್ಯಾಭ್ಯಾಸದಲ್ಲಿ ಮುಂಚೂಣಿಯಲ್ಲಿ ದ್ದರೂ, ದಾರಿ ತಪ್ಪುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ. ಒಂದು ಅಧ್ಯಯನದ ಪ್ರಕಾರ ಶೇ. 30 ರಷ್ಟು ಯುವಕರು ಕೆಟ್ಟ ಚಟಗಳಿಗೆ ಬಲಿಯಾಗುತ್ತಿದ್ದಾರೆ. ಇನ್ನು ಶೇ.30 ರಷ್ಟು ಯುವಜನತೆ ಇಂಟರ್ನೆಟ್, ಫೇಸ್‌ಬುಕ್ ಮತ್ತು ರೀಲ್ಸ್ ಮದದಲ್ಲಿ ಮುಳುಗಿ ಮಾನಸಿಕವಾಗಿ ದುರ್ಬಲರಾಗುತ್ತಿದ್ದಾರೆ. ಇದು ಕುಟುಂಬ ವ್ಯವಸ್ಥೆಯ ಮೇಲೆ ಕೆಟ್ಟ ಪರಿಣಾಮ ಬೀರುತ್ತಿದ್ದು, ಸಮಾಜ ಈ ಬಗ್ಗೆ ಗಂಭೀರವಾಗಿ ಆಲೋಚಿಸಬೇಕಿದೆ ಎಂದು ಅವರು ಹೇಳಿದರು.

ಜಾಗತಿಕ ಯುದ್ಧ ಮತ್ತು ಶಾಂತಿಯ ಅಗತ್ಯ :

ಇಸ್ರೇಲ್-ಇರಾನ್, ರಷ್ಯಾ-ಉಕ್ರೇನ್ ಯುದ್ಧಗಳು ಜಗತ್ತಿನಾದ್ಯಂತ ಅಶಾಂತಿಯನ್ನುಂಟು ಮಾಡುತ್ತಿವೆ. ನಮ್ಮ ದೇಶದ ಮಣಿಪುರದಲ್ಲಿ ನಡೆಯುತ್ತಿರುವ ಜನಾಂಗೀಯ ಸಂಘರ್ಷಗಳು ಮನುಕುಲಕ್ಕೆ ಕಪ್ಪುಚುಕ್ಕೆಯಾಗಿವೆ. ಇಂತಹ ಸಂದರ್ಭದಲ್ಲಿ ಬಸವಣ್ಣನವರ 'ಇವನಾರವ ಇವನಾರವ ಎನ್ನದೆ ಇವ ನಮ್ಮವ ಇವ ನಮ್ಮವ' ಎಂಬ ಸಹೋದರತ್ವದ ಸಂದೇಶ ಸಾರುವ ಅವಶ್ಯಕತೆ ಇದೆ. ಆಸ್ತಿ, ಹಣ ಮತ್ತು ಸ್ವಾರ್ಥಕ್ಕಾಗಿ ಸಂಬಂಧಗಳನ್ನು ಕೊಲೆ ಮಾಡುತ್ತಿರುವ ಈ ಕಾಲದಲ್ಲಿ, ನೈತಿಕ ಶಿಕ್ಷಣ ಮತ್ತು ಬಸವಣ್ಣನವರ ಮಾನವೀಯ ಮೌಲ್ಯ ಅಳವಡಿಸಿಕೊಳ್ಳುವುದೊಂದೇ ಸಮಾಜದ ಸಕಲ ಸಮಸ್ಯೆಗಳಿಗೆ ಮದ್ದಾಗಿದೆ ಎಂದು ಅವರು ತಿಳಿಸಿದರು.

ನಮ್ಮ ಸರ್ಕಾರ ಅನುಭವ ಪಂಟಪ ನಿರ್ಮಾಣಕ್ಕೆ ಬದ್ಧವಾಗಿದ್ದು, ಈಗಾಗಲೇ 280 ಕೋಟಿ ರೂ. ಬಿಡುಗಡೆ ಮಾಡಿದೆ. ಇನ್ನು 250 ಕೋಟಿ ರೂ. ಬೇಕಾಗುವ ಸಾಧ್ಯತೆ ಇದೆ. ಅಂದುಕೊಂಡದಂತೆ ನಡೆದರೆ ಮುಂದಿನ ಬಸವ ಜಯಂತಿ ಒಳಗಾಗಿ ಅನುಭವ ಮಂಟಪ ಲೋಕಾರ್ಪಣೆಗೊಳಿಸಲಾಗುವುದು. ನಾನು ಮುತುವರ್ಜಿ ವಹಿಸಿ ಬೆಂಗಳೂರಿನಲ್ಲಿ 153 ಎಕರೆ ಪ್ರದೇಶದಲ್ಲಿ ನಿರ್ಮಾಣವಾಗುತ್ತಿರುವ ಸಸ್ಯ ಉದ್ಯಾನವನಕ್ಕೆ ಬಸವೇಶ್ವರ್ ಅವರು ಹೆಸರಿಟ್ಟಿದ್ದೇನೆ ಎಂದರು.

ಪೌರಾಡಳಿತ ಹಾಗೂ ಹಜ್ ಖಾತೆ ಸಚಿವ ರಹೀಂ ಖಾನ್ ಅವರು ಮಾತನಾಡಿ, ಬಸವಣ್ಣನವರ ಸಂದೇಶ ಮತ್ತು ವಚನ ಸಿದ್ಧಾಂತಗಳು ಕೇವಲ ಮಾತಿಗೆ ಸೀಮಿತವಾಗದೆ, ನಮ್ಮ ದೈನಂದಿನ ಬದುಕಿನ ಭಾಗವಾಗಬೇಕು.

ಜಿಲ್ಲೆಯ ಜನರು ಈ ಬಸವಣ್ಣನವರ ತತ್ವಾದರ್ಶಗಳು ಪಾಲಿಸಿದಾಗ ಮಾತ್ರ ವಿಶ್ವಗುರು ಬಸವಣ್ಣನವರ ಆಶಯಗಳು ಜಗತ್ತಿಗೆ ತಲುಪಲು ಸಾಧ್ಯ ಎಂದು ನುಡಿದರು.

ಶಾಸಕ ಶೈಲೇಂದ್ರ ಬೆಲ್ದಾಳೆ, ಚರಮೂರ್ತಿ ಚರಂತೇಶ್ವರ ವಿರಕ್ತಮಠ ಬಸವಬೆಳವಿಯ ಶರಣ ಬಸವ ಮಹಾಸ್ವಾಮಿ ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ತಹಶಿಲ್ದಾರ್ ರವೀಂದ್ರ, ದಾಮಾ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ್ ಸಿಂಧೆ, ತಹಸೀಲ್ದಾರ್ ಗ್ರೇಡ್-2 ಜಿಯಾವೋದ್ದಿನ್, ಬಸವ ಜಯಂತಿ ಉತ್ಸವ ಸಮಿತಿಯ ಅಧ್ಯಕ್ಷ ರಾಜನೀಶ್ ವಾಲಿ, ಪ್ರಧಾನ ಕಾರ್ಯದರ್ಶಿ ಶಶಿಧರ್ ಹೊಸಳ್ಳಿ, ಮಹಿಳಾ ಘಟಕದ ಅಧ್ಯಕ್ಷೆ ದೇವಿಕಾ ನಾಗೋರೆ, ಶಿವಶರಣಪ್ಪ ವಾಲಿ, ಶ್ರೀಕಾಂತ್ ಸ್ವಾಮಿ, ಶಾಮಣ್ಣ ಬಾವಗಿ ಹಾಗೂ ಸುರೇಶ್ ಚನ್ನಶೆಟ್ಟಿ ಸೇರಿದಂತೆ ಸಮಾಜದ ಮುಖಂಡರು ಉಪಸ್ಥಿತರಿದ್ದರು.

ಬಸವ ಜಯಂತಿ : ನಗರದೆಲ್ಲೆಡೆ ಶರಣ ಸಂಸ್ಕೃತಿ ಮೆರಗು



ಕಲಬುರಗಿ,ಏ.21

ವಿಶ್ವಗುರು ಬಸವಣ್ಣನವರ ಜಯಂತಿಯ ಅಂಗವಾಗಿ ನಗರದಲ್ಲಿ ಸೋಮವಾರ ಸಂಜೆ ಹಮ್ಮಿಕೊಂಡಿದ್ದ ಬಸವಣ್ಣ ಹಾಗೂ ಕಾಯಕ ಶರಣರ ಭಾವಚಿತ್ರಗಳ ಅದ್ದೂರಿ ಮೆರವಣಿಗೆಯೂ ಜರುಗಿತು.

ನಗರದ ನಗರೇಶ್ವರ ಶಾಲೆಯ ಆವರಣದಲ್ಲಿ ಮೆರವಣಿಗೆಗೆ ಚಾಲನೆ ನೀಡಲಾಯಿತು. ಇಲ್ಲಿಂದ ಹೊರಟ ಮೆರವಣಿಗೆಯು ನಗರದ ಪ್ರಮುಖ ವ್ಯಾಪಾರ ಕೇಂದ್ರಗಳಾದ ಹುಮನಾಬಾದ್ ಬೇಸ್, ಸೂಪರ್ ಮಾರ್ಕೆಟ್, ಸಿಟಿ ಸೆಂಟ್ರಲ್ ಮಾಲ್ ಮೂಲಕ ಹಾದು ಅಂತಿಮವಾಗಿ ಜಗತ್ ವೃತ್ತದಲ್ಲಿರುವ ಬಸವೇಶ್ವರ ಪುತ್ಥಳಿಗೆ ತಲುಪಿ ಸಂಪನ್ನಗೊಂಡಿತು. ಮಾರ್ಗದುದ್ದಕ್ಕೂ ಸಾಲು ಸಾಲಾಗಿ ನಿಂತಿದ್ದ ಜನರು ಬಸವಣ್ಣನವರ ಸ್ತಬ್ಧಚಿತ್ರಕ್ಕೆ ಪುಷ್ಪವೃಷ್ಟಿ ಕರೆದರು.

ಮೆರವಣಿಗೆಯಲ್ಲಿ ಬಸವಣ್ಣನವರ ಮೂರ್ತಿ, ನುಲಿಯ ಚಂದಯ್ಯ, ಡೋಹರ ಕಕ್ಕಯ್ಯ, ದೇವರ ದಾಸಿಮಯ್ಯ, ಮಾದರ ಚನ್ನಯ್ಯ, ನಿಜಶರಣ ಅಂಬಿಗರ ಚೌಡಯ್ಯ, ಮೇದಾರ ಕೇತಯ್ಯನವರು, ಸೇರಿದಂತೆ 10 ಕ್ಕೂ ಹೆಚ್ಚು ಭಾವಚಿತ್ರಗಳ ಗಮನ ಸೆಳೆದವು.

ಗಮನ ಸೆಳೆದ ಸಾಂಸ್ಕೃತಿಕ ಕಲಾ ತಂಡಗಳು :

ಮೆರವಣಿಗೆಗೆ ಸಾಂಸ್ಕೃತಿಕ ಕಳೆ ನೀಡಲು ನಾಡಿನ ವಿವಿಧೆಡೆಯಿಂದ ಆಗಮಿಸಿದ್ದ ಕಲಾ ತಂಡಗಳು ಜನರ ಗಮನ ಸೆಳೆದವು. ರಾಮನಗರದ ಕಪಾಳಮ್ಮ ಕಲಾ ತಂಡದ ಪೂಜೆ ಕುಣಿತ ಹಾಗೂ ಬಳ್ಳಾರಿಯ ಗಂಭೀರ ಶೈಲಿಯ ಕಹಳೆ ವಾದನ ನೋಡುಗರನ್ನು ಮಂತ್ರಮುಗ್ಧಗೊಳಿಸಿತು. ಕಲಬುರಗಿ ಜಿಲ್ಲೆಯ ಶ್ರೀಚಂದ್ ಗ್ರಾಮದ ಕಲಾವಿದರ ಡೊಳ್ಳು ಕುಣಿತ, ಹಲಗೆ ವಾದನ, ಲಂಬಾಣಿ ನೃತ್ಯ ಹಾಗೂ ಶಹನಾಯಿ ಮೇಳಗಳು ಮೆರವಣಿಗೆಯ ಮೆರುಗನ್ನು ಹೆಚ್ಚಿಸಿದವು. ನೂರಾರು ಮಹಿಳೆಯರು ಕಳಸ ಹೊತ್ತು ಶಿಸ್ತುಬದ್ಧವಾಗಿ ಹೆಜ್ಜೆ ಹಾಕಿದರು. ಯುವಜನತೆ ಡಿಜೆ ಗೀತೆಗಳ ಸದ್ದಿಗೆ ನೃತ್ಯ ಮಾಡುವ ಮೂಲಕ ಸಂಭ್ರಮ ವ್ಯಕ್ತಪಡಿಸಿದರು.

ಶ್ರೀ ಶರಣಬಸವೇಶ್ವರ ಸಂಸ್ಥಾನದ 9ನೇ ಪೀಠಾಧಿಪತಿಗಳಾದ ದೊಡ್ಡಪ್ಪ ಅಪ್ಪ ಅವರು ಮೆರವಣಿಗೆಗೆ ಚಾಲನೆ ನೀಡಿ ಆಶೀರ್ವಚನ ನೀಡಿದರು.

ವೇದಿಕೆಯಲ್ಲಿ ಹಾಗೂ ಮೆರವಣಿಗೆಯುದ್ದಕ್ಕೂ ಸಚಿವ ಶರಣಬಸವಪ್ಪ ದರ್ಶನಾಪುರ, ಉತ್ಸವ ಸಮಿತಿ ಅಧ್ಯಕ್ಷ ಬಿ.ಆರ್.ಪಾಟೀಲ್, ಶಾಸಕ ಅಲ್ಲಮಪ್ರಭು ಪಾಟೀಲ್, ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ್, ಮಾಜಿ ಶಾಸಕರಾದ ದತ್ತಾತ್ರೇಯ ಪಾಟೀಲ್ ರೇವೂರ್ ದೊಡ್ಡಪ್ಪಗೌಡ ಪಾಟೀಲ್ ನರಿಬೋಳ, ಕೆಎಂಎಫ್ ಅಧ್ಯಕ್ಷ ಆರ್.ಕೆ.ಪಾಟೀಲ್, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಜಿಲ್ಲಾಧ್ಯಕ್ಷ ಶರಣಕುಮಾರ್ ಮೋದಿ, ಮುಖಂಡರಾದ ಅಮರನಾಥ್ ಪಾಟೀಲ್, ಭೀಮಾಶಂಕರ್ ಬಿಲಗುಂದಿ, ಸೋಮಶೇಖರ್ ಗೋನಾಯಕ್, ಅರುಣಕುಮಾರ್ ಪಾಟೀಲ್ ಕೊಡಲಹಂಗಾರಗಾ, ಶಿವಕಾಂತ್ ಮಹಾಜನ್, ಜಗನಾಥ್ ಶೇಗಜಿ, ಡಾ.ಸುಧಾ ಹಾಲಕಾಯಿ, ಗೌರಿ ಚಿಚಕೋಟಿ, ಸೇರಿದಂತೆ ಸಾವಿರಾರು ಬಸವ ಅನುಯಾಯಿಗಳು ಪಾಲ್ಗೊಂಡಿದ್ದರು.

ಒಂದನೇಯ ಪುಟದಿಂದ

ಯುವತಿಗೆ ಚುಡಾಯಿಸಿದ ಆರೋಪದಲ್ಲಿ ಯುವಕನನ್ನು ಅಪಹರಿಸಿ ಕೂಡಿ ಹಾಕಿ ಹಲ್ಲೆ

ಲೇಔಟ್ ನಲ್ಲಿರುವ ಮನೆಯೊಂದರಲ್ಲಿ ಮೂರ್ನಾಲ್ಕು ಗಂಟೆಗಳ ಕಾಲ ಕೂಡಿ ಹಾಕಿ ಮನಸೋಇಚ್ಛೆ ಥಳಿಸಿದ್ದಾರೆ. ಇದರ ವೀಡಿಯೊ ವೈರಲ್ ಆಗಿದ್ದು, ವೀಡಿಯೊದಲ್ಲಿ ಮಹಿಳೆಯೊಬ್ಬಳು ಮೆಹಬೂಬ್ ಮೇಲೆ ಹಲ್ಲೆ ಮಾಡುತ್ತಿರುವುದು ಕಾಣಿಸುತ್ತದೆ.

ಈ ಬಗ್ಗೆ ಬಜಾರ್ ಠಾಣಾ ಪೊಲೀಸರನ್ನು ಸಂಪರ್ಕಿಸಿದಾಗ, ಯುವಕನ ಮೇಲಿನ ಹಲ್ಲೆಯ ವೈರಲ್ ವೀಡಿಯೋ ತಮ್ಮ ಗಮನಕ್ಕೆ ಬಂದಿದೆ. ಈ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

ಡಾ.ಬಿ.ಆರ್. ಅಂಬೇಡ್ಕರ್‌ರ ಬೃಹತ್ ಮೂರ್ತಿ ಅನಾವರಣ ಅಂಬೇಡ್ಕರ್ ದಲಿತರ - ಶೋಷಿತರ ದೇವರು -ಆದರ್ಶಗಳನ್ನು ಅಳವಡಿಸಿಕೊಳ್ಳೋಣ- ಶಿವನಗೌಡ ನಾಯಕ

ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಶೋಷಿತ ಸಮುದಾಯಗಳು ಶಿಕ್ಷಣ ಮತ್ತು ಉದ್ಯೋಗಕ್ಕೆ ಹೆಚ್ಚಿನ ಒತ್ತು ನೀಡಬೇಕು. ಅಂದಾಗ ಮಾತ್ರ ಆರ್ಥಿಕವಾಗಿ ಸದೃಢರಾಗಲು ಶಕ್ತಿ ಬರುತ್ತದೆ.

ಸಿರವಾರದ ವಾಣಿಜ್ಯೋದ್ಯಮಿ ಚುಕ್ಕಿ ಸೂಗಪ್ಪ ಸಾಹುಕಾರ ಮಾತನಾಡಿ, ಬಾಬಾ ಸಾಹೇಬ್ ಅಂಬೇಡ್ಕರ್ ರವರ ಮೂರ್ತಿಯನ್ನು ದಾನ ನೀಡಿದ ತೋಟಗಾರಿಕೆ ಇಲಾಖೆಯ ಯೇಸುಮಿತ್ರಪ್ಪ ರವರ ಸೇವೆ ಶ್ಲಾಘನೀಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಮೊದಲು ಗ್ರಾಮದ ಮಹರ್ಷಿ ವಾಲ್ಮೀಕಿ ವೃತ್ತದಿಂದ ಡಾ.ಬಿ.ಆರ್. ಅಂಬೇಡ್ಕರ್ ರವರ ಮೂರ್ತಿ ವರೆಗೆ ಬಾಬಾ ಸಾಹೇಬ್ ಅಂಬೇಡ್ಕರ್ ರವರ ಭಾವಚಿತ್ರದ ಮೆರವಣಿಗೆ ಅದ್ದೂರಿಯಾಗಿ ಜರುಗಿತು.

ಮೂರ್ತಿ ದಾನಿಗೆ ಸನ್ಮಾನ: ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ರವರ ಬೃಹತ್ ಮೂರ್ತಿಯನ್ನು ದಾನ ನೀಡಿದ ಸಿರವಾರ ತೋಟಗಾರಿಕೆ ಇಲಾಖೆಯ ಏಸುಮಿತ್ರಪ್ಪ ಅವರನ್ನು ಅಂಬೇಡ್ಕರ್ ರವರ ಅನುಯಾಯಿಗಳು ಹಾಗೂ ವಿವಿಧ ಸಂಘ-ಸಂಸ್ಥೆಗಳ ಮುಖಂಡರು ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಎನ್.ಉದಯಕುಮಾರ್ ಸಾಹುಕಾರ, ದೇವಣ್ಣ ನವಲಕಲ್, ನಾಗಪ್ಪ ನವಲಕಲ್, ಅಮರೇಗೌಡ ನವಲಕಲ್, ಬಿಎಸ್ಪಿ ರಾಜ್ಯ ಕಾರ್ಯದರ್ಶಿ ಎಂ.ಬಸವರಾಜ ಭಂಡಾರಿ, ಬಹುಜನ ಸಂಘರ್ಷ ಸಮಿತಿಯ ಮಹಾ ಪೋಷಕ ಎಂ.ಆರ್.ಭೇರಿ, ಸಂಸ್ಥಾಪಕ ಜೆ.ಶರಣಪ್ಪ ಬಲ್ಲಟಗಿ, ಕರ್ನಾಟಕ ದಲಿತ ಸಂಘಟನೆಗಳ ಒಕ್ಕೂಟದ ರಾಜ್ಯ ಸಂಚಾಲಕ ಎಲ್.ವಿ.ಸುರೇಶ, ಹಸಿರು ಸೇನೆ ಸಂಘಟನೆಯ ಜಿಲ್ಲಾಧ್ಯಕ್ಷೆ ಅನಿತಾ ಮಂತ್ರಿ, ಗ್ರಾ.ಪಂ ಮಾಜಿ ಅಧ್ಯಕ್ಷ ಬಸವರಾಜ ಬುಲೆಟ್, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಆರೀಫ್ ಮಿಯಾ, ಎ.ಎಸ್.ಐ ಬಸನಗೌಡ, ಪಿಡಿಒ ವಿಜಯಕುಮಾರ್, ಶಾಲಾ ಮುಖ್ಯಗುರುಗಳಾದ ಮಲ್ಲಪ್ಪ ಚಾಗಭಾವಿ, ಮೌನೇಶ ಹಿರೇಹಣಗಿ, ಶಿವಪ್ಪ ಹಿರೇಹಣಗಿ, ವಕೀಲರಾದ ಯಲ್ಲಪ್ಪ ಹಿರೇಬಾದರದಿನ್ನಿ, ಮಲ್ಲೇಶ ಮಾಚನೂರು, ಹನುಮಂತ ಬ್ಯಾಗವಾಟ್, ಡಿ.ಎಚ್. ಭೀಮಣ್ಣ, ದೇವಪುತ್ರಪ್ಪ ಚಿಟ್ಟಿ, ಯಲ್ಲಪ್ಪ ನವಲಕಲ್, ನಾಗರಾಜ ಸಿರವಾರ, ಮೌನೇಶ ನವಲಕಲ್, ತಿಮ್ಮಣ್ಣ ಮರಾಟ, ಹನುಮೇಶ ಭೇರಿ, ಮೌನೇಶ ಶಾಖಾಪೂರು, ರಮೇಶ ಲಕ್ಕಮದಿನ್ನಿ ಸೇರಿದಂತೆ ವಿವಿಧ ಸಂಘ-ಸಂಸ್ಥೆಗಳ ಮುಖಂಡರು, ಹಿರಿಯರು, ಯುವಕರು ಉಪಸ್ಥಿತರಿದ್ದರು.

ಪಿಂಜಾರ ನದಾಫ್ ಪ್ರತ್ಯೇಕ ಅಭಿವೃದ್ಧಿ ನಿಗಮ ಮಂಡಳಿ ಸ್ಥಾಪನೆಗೆ ಒತ್ತಾಯ

ಜನಾಂಗವು ಸಾಮಾಜಿಕ, ಶೈಕ್ಷಣಿಕ, ಔದ್ಯೋಗಿಕ, ರಾಜಕೀಯ ಹಾಗೂ ಹಲವಾರು ರಂಗಗಳಲ್ಲಿ ಅತ್ಯಂತ ಹಿಂದುಳಿದ ಮತ್ತು ಬಡತನ ನೆರಳಿನಲ್ಲಿ ಸಂಕಷ್ಟಕರ ಜೀವನವನ್ನು ನಡೆಸುತ್ತಿರುವ ಶೋಷಿತ ಸಮಾಜವಾಗಿದೆ.

ಈ ಜನಾಂಗವು ಹಿಂದಿನಿಂದ ಹತ್ತಿ, ಅರಳೆಯಿಂದ ಗಾದಿ, ದಿಂಬು, ಜಮಖಾನ, ಗುಡಾರ, ಹಗ್ಗ ತಯಾರಿಕೆ ವೃತ್ತಿಯಲ್ಲಿ ತೊಡಗಿದ್ದು ಮತ್ತು ಹಳ್ಳಿಹಳ್ಳಿಗೆ ಹೋಗಿ ಗಾದಿ, ದಿಂಬು ತಯಾರಿಸುವ ಅಲೆಮಾರಿ ಜನಾಂಗವೆಂದೇ ಗುರುತಿಸಲ್ಪಡುತ್ತದೆ. ಆಧುನಿಕ ಡನ್ಲಪ್ ಬೆಡ್ ಉತ್ಪಾದನೆಗಳಿಂದ ತಯಾರಿಸುವ ಹತ್ತಿ ಅರಳೆಯ ಗಾದಿ ದಿಂಬುಗಳು ಆಧುನಿಕ ದಿನಗಳಿಂದ ನಶಿಸಿ ಹೋಗಿದೆ.

ಇವರನ್ನು 1994 ರಲ್ಲಿ ನಮ್ಮನ್ನು ಹಿಂದುಳಿದ ಪ್ರವರ್ಗ-1 ರಲ್ಲಿ ಸೇರಿಸಲಾಯಿತು. ಹಾಗಾಗಿ ತೀರಾ ಆರ್ಥಿಕ ಸಂಕಷ್ಟದಲ್ಲಿ ಇರುವ ಸಮುದಾಯದ ಅಭಿವೃದ್ಧಿಗೆ

ಕೂಡಲೇ ಪಿಂಜಾರ ನದಾಫ್ ಸಮಾಜದ ಪ್ರತ್ಯೇಕ ನಿಗಮ ಮಂಡಳಿ ಸ್ಥಾಪಿಸುವುದು ಅತ್ಯಾವಶ್ಯಕವಾಗಿದೆ. ಈ ಸಮುದಾಯ ಮೂಲಭೂತ ಸೌಕರ್ಯದಿಂದ ವಂಚಿತಗೊಂಡಿದೆ ಎಂದು ದೂರಿದರು. ಸಮುದಾಯ ಸುಮಾರು 30 ವರ್ಷಗಳಿಂದ ನಮ್ಮ ಜನಾಂಗದ ಪ್ರತ್ಯೇಕ ಅಭಿವೃದ್ಧಿ ಮಂಡಳಿ ಸ್ಥಾಪಿಸಬೇಕೆಂದು ಹೋರಾಟ ಮಾಡಿದರೂ ಇದುವರೆಗೂ ನಮ್ಮ ಬೇಡಿಕೆ ಈಡೇರಿಸಿಲ್ಲ ಎಂದು ತೀವ್ರ ಅಸಮಾಧಾನ ವ್ಯಕ್ತಪಡಿಸಿದರೂ.

ಪಟ್ಟಣದ ವಿವಿಧ ವಾರ್ಡಗಳಲ್ಲಿ 5ಕೋಟಿ 26 ಲಕ್ಷ ವೆಚ್ಚದಲ್ಲಿ ಕಾಮಗಾರಿಗಳಿಗೆ ಚಾಲನೆ: ಬೋಸರಾಜು

ಹಾಗೂ ಜಿ.ಪಂ. ಸಿ.ಇ.ಓ.ಗಳ ಸಭೆಯನ್ನು ಕೂಡ ನಡೆಸಿದ್ದಾರೆ. ಸಿರವಾರ ಮತ್ತು ಕವಿತಾಳ ನಲ್ಲಿ ಕೂಡ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ಕೇಂದ್ರ ಸರ್ಕಾರ ರಾಜ್ಯಕ್ಕೆ ನ್ಯಾಯಯುತವಾದ ಅನುದಾನ ನೀಡದೆ ಇರುವುದರಿಂದ ರಾಜ್ಯದಲ್ಲಿ ಅಭಿವೃದ್ಧಿಗೆ ಸಮಸ್ಯೆಯಾಗುತ್ತಿದೆ ಮನರೇಗಾ ಯೋಜನೆಯಡಿಯಲ್ಲಿ ಕೇಂದ್ರದಿದ ರಾಜ್ಯಕ್ಕೆ 6ಸಾವಿರ ಕೋಟಿಬರುತ್ತಿತು ಅದು ನಿಲುಗಡೆಯಾಗಿದೆ. ವಿ,ರಾಮಜೀ ಯೋಜನೆಗೆ ಪರ್ಯಾಯವಾಗಿ ಯೋಜನೆಯನ್ನು ರೂಪಿಸುವುದಕ್ಕೆ ರಾಜ್ಯ ಸರ್ಕಾರ ಚಿಂತನೆ ನಡೆಸುತ್ತಿದೆ ಎಂದು ತಿಳಿಸಿದರು.

ಶಾಸಕ ಹಂಪಯ್ಯನಾಯಕ, ನಯೋಪ್ರ ಅಧ್ಯಕ್ಷ ಅಬ್ದುಲ್ ಗಾಫೂರ್ ಸಾಬ್,ರಾಜಾ ಸುಭಾಶ್ಚಂದ್ರನಾಯಕ,ಗ್ಯಾರಟಿ ಸಮಿತಿ ಅಧ್ಯಕ್ಷರಾದ ಬಿ.ಕೆ.ಅಂಬರೇಶಪ್ಪ, ಖಾಲಿದ್ ಗುರು ಇದ್ದರು.

ಸಾರ್ವಜನಿಕ ಸ್ಥಳಗಳಲ್ಲಿ ಮಲ, ಮೂತ್ರ ವಿಸರ್ಜನೆ ನಿಷೇಧ: ಮೊಹೊಪಾತ್ರ

ಮಾಡಿದಲ್ಲಿ ಮೂತ್ರ ವಿಸರ್ಜನೆಗೆ 500ರೂ. ಮತ್ತು ಮಲ ವಿಸರ್ಜನೆಗೆ 1000 ರೂ. ದಂಡ ವಿಧಿಸಲಾಗುವುದು. ಸಾರ್ವಜನಿಕರು, ಸಾರ್ವಜನಿಕ ಶೌಚಾಲಯಗಳು, ಹೋಟೆಲ್ ಮತ್ತು ಪೆಟ್ರೋಲ್ ಬಂಕ್‌ಗಳ ಶೌಚಾಲಯಗಳನ್ನು ಉಚಿತವಾಗಿ ಬಳಸಬಹುದಾಗಿದೆ.

ಈ ಬಗ್ಗೆ ಸಾರ್ವಜನಿಕರಿಂದ ಸಲಹೆ, ಸೂಚನೆ ಹಾಗೂ ಆಕ್ಷೇಪಣೆಗಳನ್ನು ಪ್ರಕಟಣೆ ಪ್ರಚುರ ಪಡಿಸಿದ 07 ದಿವಸಗಳೊಗಾಗಿ ಸೂಕ್ತ ದಾಖಲೆಗಳೊಂದಿಗೆ ಲಿಖಿತವಾಗಿ ಸಲ್ಲಿಸಬಹುದಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರಳಿಗನೂರು: 893 ನೇ ಬಸವ ಜಯಂತಿ ಭಾವಚಿತ್ರದ ಮೆರವಣಿಗೆ ಶ್ರೇಷ್ಠ ವಚನಕಾರ ಬಸವಣ್ಣ - ಜೆ ನಾಗೇಂದ್ರ ಗೌಡ



ಸಿರುಗುಪ್ಪ - ಸಮಾಜದ ಅಂಕು ಡೊಂಕುಗಳನ್ನು ತಿದ್ದಿ ಎಲ್ಲರನ್ನು ಒಂದೇ ಎಂಬ ಏಕತ ಭಾವಕ್ಕೆ ತಂದವರು ಮಹಾನ್ ಮಾನವತಾವಾದಿ ಸಾಂಸ್ಕೃತಿಕ ನಾಯಕ ಬಸವೇಶ್ವರರು ಎಂದು ಶರಣ ಸಾಹಿತ್ಯ ಪರಿಷತ್ ತಾಲೂಕ ಅಧ್ಯಕ್ಷರಾದ ಜೆ ನಾಗೇಂದ್ರ ಗೌಡ ಅವರು ಹೇಳಿದರು ಸಿರುಗುಪ್ಪ ತಾಲೂಕು ಅರಳಿಗನೂರು ಗ್ರಾಮದಲ್ಲಿ ವೀರಶೈವ ಲಿಂಗಾಯಿತ ಎಲ್ಲಾ ಸಮುದಾಯದವರ ಸಮ್ಮುಖದಲ್ಲಿ 893 ನೇ ಜಗಜ್ಯೋತಿ ಬಸವೇಶ್ವರ ಜಯಂತಿ ಅಂಗವಾಗಿ ಬಸವಣ್ಣನವರ ಭಾವಚಿತ್ರಕ್ಕೆ ಮಾಲಾರ್ಪಣೆ ಪುಷ್ಪದೊಂದಿಗೆ ಗೌರವಿಸಿ ಸ್ಮರಿಸುವ ಮೂಲಕ ನಮನ ಸಮರ್ಪಿಸಿದರು ಮೆರವಣಿಗೆಗೆ ಚಾಲನೆ ನೀಡಿ ಅವರು ಮಾತನಾಡುತ್ತಾ ವಿಶ್ವಗುರು ಶ್ರೇಷ್ಠ ವಚನಕಾರ ಹಾಗೂ ಕರ್ನಾಟಕದ ಸಾಂಸ್ಕೃತಿಕ ನಾಯಕ ಎಂದು ಘೋಷಿಸಲ್ಪಟ್ಟಿರುವ ಬಸವಣ್ಣನವರ ಜನ್ಮದಿನೋತ್ಸವವನ್ನು ನಾಡಿನಾದ್ಯಂತ ಸಂಭ್ರಮದಿಂದ ಆಚರಿಸಲಾಗುತ್ತಿದೆ ಎಂದು ಕರೆ ನೀಡಿದ ಅವರು 12ನೇ ಶತಮಾನದಲ್ಲೆ ಸಮಾನತೆ ಏಕತೆ ಮತ್ತು ಕಾಯಕವೇ ಕೈಲಾಸ ಎಂಬ ಉದಾತ್ತ ತತ್ವಗಳನ್ನು ಸಾರಿದ ಮಹಾನ್ ಚೇತನರು ಬಸವಣ್ಣ ಇವರ ಸನ್ಮಾರ್ಗದಲ್ಲಿ ನಾವೆಲ್ಲರೂ ಸಾಗಬೇಕಿದೆ ಎಂದು ಅವರು ಸಂದೇಶ ನೀಡಿದರು ಈ ಸಂದರ್ಭದಲ್ಲಿ ಹೆಚ್ ಮಲ್ಲಿ ಗೌಡ ಆರ್ ಧರ್ಮನ ಗೌಡ ಎಚ್ ಶಿವಮೂರ್ತಿ ಗೌಡ ಜಿ ಮಲ್ಲಿ ಗೌಡ ಜೆ ಬಸವರಾಜಣ್ಣ ಗ್ರಾಮ ಪಂಚಾಯತ್ ಮಾಜಿ ಸದಸ್ಯರು ಉಪ್ಪಾರ ಹೊಸಳ್ಳಿ ಹಿರಿಯರು ಕಿರಿಯರು ಗಣ್ಯರು ಯುವಕರು ಯುವತಿಯರು ವಿದ್ಯಾರ್ಥಿಗಳು ಮೆರವಣಿಗೆಯಲ್ಲಿ ಭಾಗವಹಿಸಿದ್ದರು .

ವೀರಶೈವ ಕಲ್ಯಾಣ ಮಂಟಪಕ್ಕೆ ಅಡಿಗಲ್ಲು



ಚಿತ್ತಾಪುರ,ಏ.21

ವೀರಶೈವ ಕಲ್ಯಾಣ ಮಂಟಪ ನಿರ್ಮಾಣಕ್ಕೆ ವೈಯಕ್ತಿಕ ಹಾಗೂ ಜಿಲ್ಲಾ ಘಟಕದ ವತಿಯಿಂದ ಸಹಾಯ ಮಾಡುವುದಲ್ಲದೇ, ಇದರ ಅಭಿವೃದ್ಧಿಗೆ ಸದಾ ಬೆನ್ನೆಲುಬಾಗಿ ನಿಲ್ಲುತ್ತೇನೆ ಎಂದು ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ಶರಣಕುಮಾರ ಮೋದಿ ಹೇಳಿದರು.

ಪಟ್ಟಣದ ಸ್ಟೇಷನ್ ರಸ್ತೆಯ ವೀರಶೈವ ಸಮಾಜದ ನಿವೇಶನದಲ್ಲಿ ವೀರಶೈವ ಲಿಂಗಾಯತ ಮಹಾಸಭಾ ವತಿಯಿಂದ ಹಮ್ಮಿಕೊಂಡಿದ್ದ ಕಲ್ಯಾಣ ಮಂಟಪದ ಅಡಿಗಲ್ಲು ಸಮಾರಂಭದಲ್ಲಿ ಅವರು ಮಾತನಾಡಿದರು. ಜಿಲ್ಲೆಯಲ್ಲೇ ಚಿತ್ತಾಪುರ ತಾಲೂಕಿನಲ್ಲಿ ವೀರಶೈವ ಲಿಂಗಾಯತ ಸಮಾಜದ ಸಂಘಟನೆ ಬಲಿಷ್ಠವಾಗಿದೆ. ಹೀಗಾಗಿ ಇಲ್ಲಿ ವೀರಶೈವ ಕಲ್ಯಾಣ ಮಂಟಪ ಹಾಗೂ ವಿದ್ಯಾರ್ಥಿ ವಸತಿ ನಿಲಯ ನಿರ್ಮಾಣ ಅಗತ್ಯವಿದೆ ಎಂದು ಹೇಳಿದರು.

ಬಸವ ಭವನ ನಿರ್ಮಾಣ ಸಮಿತಿ ಅಧ್ಯಕ್ಷ ರಮೇಶ್ ಮರಗೋಳ ಮಾತನಾಡಿ, ಸಮಾಜ ಮುಖಂಡರ ಅಭಿಪ್ರಾಯದ ಮೇರೆಗೆ ಪಟ್ಟಣದಲ್ಲಿ ಸುಸಜ್ಜಿತ ಕಲ್ಯಾಣ ಮಂಟಪ ನಿರ್ಮಾಣಕ್ಕೆ ಮುಂದಾಗಿದ್ದು, ಇದಕ್ಕೆ ಅಂದಾಜು 2 ಕೋಟಿ ರೂ. ವೆಚ್ಚವಾಗಲಿದೆ. ದೇಣಿಗೆ ಸಂಗ್ರಹದ ಮೂಲಕ ಕಾಮಗಾರಿ ಕೈಗೊಳ್ಳಲಾಗುತ್ತಿದ್ದು, ಈಗಾಗಲೇ ಮಾಜಿ ಶಾಸಕ ವಿಶ್ವನಾಥ ಪಾಟೀಲ ಹೆಬ್ಬಾಳ ಅವರು 5 ಲಕ್ಷ ರೂ. ದೇಣಿಗೆ ನೀಡಿದ್ದಾರೆ. ಮುಂದಿನ ಒಂದು ವರ್ಷದೊಳಗೆ ಕಾಮಗಾರಿ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ ಎಂದು ಹೇಳಿದರು.

ಕಂಬಳೇಶ್ವರ ಮಠದ ಶ್ರೀ ಸೋಮಶೇಖರ ಶಿವಾಚಾರ್ಯರು ಮಾತನಾಡಿ, ಪಟ್ಟಣದ ಹೃದಯ ಭಾಗದಲ್ಲಿ 90150 ಅಳತೆಯ ನಿವೇಶನವನ್ನು ವೀರಶೈವ ಸಮಾಜಕ್ಕಾಗಿ ಖರೀದಿಸಿ ಕಾಯ್ದಿಟ್ಟಿರುವ ಶಿವರಾವ್ ಪಾಟೀಲ ಬೆಳಗುಂಪಾ ಅವರ ಕಾರ್ಯ ಶ್ಲಾಘನೀಯವಾಗಿದೆ ಎಂದು ಹೇಳಿದರು. ಅಭಿಮಾನ ಇದ್ದರೆ ಅಭಿವೃದ್ಧಿ ಸಾಧ್ಯ. ಎಲ್ಲರೂ ಪಕ್ಷಪಾತ ಬದಿಗಿಟ್ಟು ಒಗ್ಗಟ್ಟಿನಿಂದ ಕೆಲಸ ಮಾಡುತ್ತಿರುವುದು ಸಮಾಜಕ್ಕೆ ಉತ್ತಮ ಕೊಡುಗೆಯಾಗಿದೆ. ನಿರ್ಮಾಣವಾದ ಕಲ್ಯಾಣ ಮಂಟಪವನ್ನು ಬಡವರಿಗೆ ಅನುಕೂಲವಾಗುವಂತೆ ಬಳಸಬೇಕು ಎಂದು ಹೇಳಿದರು. ಮಾಜಿ ಶಾಸಕ ವಿಶ್ವನಾಥ ಪಾಟೀಲ ಹೆಬ್ಬಾಳ, ಮುಖಂಡರಾದ ವೀರಣ್ಣಗೌಡ ಪರಸರೆಡ್ಡಿ, ಶಿವಾನಂದ ಪಾಟೀಲ ಮರತೂರ, ಚಂದ್ರಶೇಖರ ಅವಂಟಿ, ಭೀಮಣ್ಣ ಸಾಲಿ ಮಾತನಾಡಿದರು.

ಈ ಸಂದರ್ಭದಲ್ಲಿ ಮಹಾಸಭಾ ತಾಲೂಕು ಗೌರವಾಧ್ಯಕ್ಷ ಲಿಂಗಾರೆಡ್ಡಿ ಭಾಸರೆಡ್ಡಿ, ಬಸವ ಜಯಂತಿ ಸಮಿತಿ ಅಧ್ಯಕ್ಷ ಬಸವರಾಜ ಪಾಟೀಲ ಬೆಳಗುಂಪಾ, ಡಿಕೆ ಪಾಟೀಲ್ ಮುಡಬೂಳ, ಡಾ.ಪ್ರಭುರಾಜ ಕಾಂತಾ, ಸೋಮಶೇಖರ ಪಾಟೀಲ ಬೆಳಗುಂಪಾ, ರಾಜಶೇಖರ್ ತಿಮ್ಮನಾಯಕ, ಮಲ್ಲಿನಾಥ ಇಂದೂರ, ಜಗಣ್ಣಗೌಡ ರಾಮತೀರ್ಥ, ಓಂಕಾರ ರೇಷ್ಮೆ ಮಹಾಂತಗೌಡ ಪಾಟೀಲ, ಮಲ್ಲಿನಾಥ ಪಾಟೀಲ ಸನ್ನತ್ತಿ, ಆನಂದ ಪಾಟೀಲ ನರಿಬೋಳ, ರವೀಂದ್ರ ರೆಡ್ಡಿ ಭಂಕಲಗಿ, ನಾಗುಗೌಡ ಅಲ್ಲೂರ, ರವೀಂದ್ರ ರೆಡ್ಡಿ ಅನ್ನಪೂರ, ಕೋಟೇಶ್ವರ ರೇಷ್ಮಿ, ರವಿ ಪಡ್ಲಾ, ರಮೇಶ್ ಬೊಮ್ಮನಳ್ಳಿ, ನಾಗಯ್ಯ ಗುತ್ತೇದಾರ, ಹಣಮಂತ ಸಂಕನೂರ, ವಿಶ್ವನಾಥ ಕುಂಬಾರ, ಅಂಬರೀಷ್ ಸುಲೇಗಾಂವ, ಪ್ರಕಾಶ್ ಹಂಚನಾಳ, ಸುರೇಶ್ ಪಾಟೀಲ ಮುಡಬೂಳ ಸೇರಿದಂತೆ ಇತರರು ಇದ್ದರು.

ಬಸವೇಶ್ವರರು ಸಮಾಜದ ಅಂಕುಡೊಂಕು ತಿದ್ದಿದ ಮಹಾನ್ ದಾರ್ಶನಿಕ : ವಿರುಪಾಕ್ಷಿ



ಕನಕಗಿರಿ, ಏ.21

ಜಗಜ್ಯೋತಿ ಬಸವೇಶ್ವರರು ತಮ್ಮ ವಚನಗಳ ಮೂಲಕ ಆಗಿನ ಸಮಾಜದಲ್ಲಿ ಬೇರೂರಿದ್ದ ಅಂಕುಡೊಂಕು ತಿದ್ದಿದ ಮಹಾನ್ ದಾರ್ಶನಿಕ ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿ ವಿರುಪಾಕ್ಷಿ ತಿಳಿಸಿದರು.

ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯತ್ ಮತ್ತು ಪಟ್ಟಣ ಪಂಚಾಯತ್ ಹಾಗೂ ಇಲ್ಲಿನ ವೀರಶೈವ ಲಿಂಗಾಯತ ಸಮಾಜದ ಸಹಯೋಗದಲ್ಲಿ ಸೋಮವಾರ ಬಸವೇಶ್ವರ ವೃತ್ತದಲ್ಲಿ ನಡೆದ ಬಸವ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಬಸವಣ್ಣನವರು ಗೊಡ್ಡು ಸಂಪ್ರದಾಯ, ಕಂದಾಚಾರ, ಧಾರ್ಮಿಕ ಮೌಢ್ಯ ಇತರೆ ಸಾಮಾಜಿಕ ಪಿಡುಗುಗಳ ವಿರುದ್ದ ಜನ ಸಾಮಾನ್ಯರಲ್ಲಿ ಅರಿವು ಮೂಡಿಸಿದರು ಎಂದು ತಿಳಿಸಿದರು. ಬಸವಣ್ಣನವರ ವಿಚಾರಗಳನ್ನು ಪ್ರತಿಯೊಬ್ಬರು ಅರ್ಥ ಮಾಡಿಕೊಂಡರೆ ದೇಶದಲ್ಲಿ ಮೇಲು ಕೀಳು, ಶ್ರೇಷ್ಠ ಕನಿಷ್ಠ ಎಂಬ ಭಾವನೆ ಇರುತ್ತಿರಲಿಲ್ಲ ಎಂದು ಹೇಳಿದರು.


ಪಿಐ ನಾರಾಯಣ ವಿ ಮಾತನಾಡಿ, ಆಗಿನ ಸಾಮಾಜಿಕ ವ್ಯವಸ್ಥೆಯಲ್ಲಿ ಬಸವಣ್ಣನವರು ಉನ್ನತ ಕುಲದಲ್ಲಿ ಜನಿಸಿದರೂ ಎಲ್ಲಾ ವರ್ಗದವರಿಗೂ ಸಮಾನತೆ, ಸ್ವಾತಂತ್ರ್ಯಕ್ಕಾಗಿ ಹೋರಾಟ ನಡೆಸಿದರು ಎಂದು ತಿಳಿಸಿದರು.

ಸಮ ಸಮಾಜ ನಿರ್ಮಾಣಕ್ಕೆ ಬಸವಣ್ಣನವರು ಬೋಧಿಸಿದ ತತ್ವ, ಸಿದ್ಧಾಂತಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಪಾಲನೆ ಮಾಡಿದಾಗ ಮಾತ್ರ ಜಯಂತಿ ಆಚರಣೆ ಸಾರ್ಥಕವಾಗುತ್ತದೆ ಎಂದು ತಿಳಿಸಿದರು.

ತಹಶೀಲ್ದಾರ್ ವಿಶ್ವನಾಥ ಮುರುಡಿ ಮಾತನಾಡಿ, ಸತ್ಯ ಮಾರ್ಗದಲ್ಲಿ ನಡೆದರೆ ಜೀವನದಲ್ಲಿ ಎದುರಾಗುವ ಸಮಸ್ಯೆಗಳನ್ನು ನಿಭಾಯಿಸುವ ಶಕ್ತಿ ಬರುತ್ತದೆ ಎಂಬುದನ್ನು ಬಸವಣ್ಣನ ವಚನಗಳ ಮೂಲಕ ಮನದಟ್ಟು ಮಾಡಿಕೊಳ್ಳಬೇಕು, ಜಗಜ್ಯೋತಿ ಬಸವಣ್ಣನವರು 12ನೇ ಶತಮಾನದಲ್ಲಿ ಅನುಭವ ಮಂಟಪ ನಿರ್ಮಾಣ ಮಾಡಿ ಎಲ್ಲಾ ಜಾತಿ, ವರ್ಗದ ಜನರನ್ನು ಒಂದುಗೂಡಿಸಿ ಸಮಾನತೆಯ ಮೂಲಕ ವಿಶ್ವದ ಪ್ರಜಾಪ್ರಭುತ್ವಕ್ಕೆ ಭದ್ರ ಬುನಾದಿ ಹಾಕಿದರು ಎಂದರು.

ತಾಲ್ಲೂಕು ಪಂಚಾಯತ್ ಪ್ರಭಾರ ಇಒ ರಾಜಶೇಖರ, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಲಕ್ಷ್ಮಣ ಕಟ್ಟಿಮನಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗಂಗಾಧರಸ್ವಾಮಿ ಕಲ್ಲಬಾಗಿಲಮಠ, ವಕ್ತಾರ ಶರಣಬಸಪ್ಪ ಭತ್ತದ, ನಿವೃತ್ತ ಶಿಕ್ಷಕ ದೊಡ್ಡಪ್ಪ ಭಾವಿಕಟ್ಟಿ, ನೀಲಕಂಠ ಬಡಿಗೇರ ಮಾತನಾಡಿದರು.

ಪಟ್ಟಣ ಪಂಚಾಯತ್ ಉಪಾಧ್ಯಕ್ಷ ಕಂಠಿರಂಗ ನಾಯಕ, ಖಜಾನಾಧಿಕಾರಿ ದುರ್ಗಾಸಿಂಗ್, ಅರಣ್ಯ ವಲಯ ಪಾಲಕ ಮಹಾಂತೇಶ ಕುಂಬಾರ, ಮೇಲ್ವಿಚಾರಕರಾದ ಹುಸೇನಬೀ, ಪಂಪನಗೌಡ, ಸಿ ಆರ್ ಪಿ ವಿಜಯಕುಮಾರ ಹೊಸಳ್ಳಿ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ವೀರೇಶ ಸಮಗಂಡಿ, ಬಿಜೆಪಿ ಮಂಡಲ ಅಧ್ಯಕ್ಷ ಸಣ್ಣ ಕನಕಪ್ಪ, ಮಾಜಿ ಅಧ್ಯಕ್ಷ ಮಹಾಂತೇಶ ಸಜ್ಜನ್, ಪ್ರಧಾನ ಕಾರ್ಯದರ್ಶಿ ಪ್ರಕಾಶ ಹಾದಿಮನಿ, ಪಟ್ಟಣ ಪಂಚಾಯಿತಿ ಸದಸ್ಯರಾದ ಸಂಗಪ್ಪ ಸಜ್ಜನ, ಸುರೇಶ ಗುಗ್ಗಳಶೆಟ್ರ, ಅನಿಲಕುಮಾರ ಬಿಜ್ಜಳ, ಶೇಷಪ್ಪ ಪೂಜಾರ, ಸಿದ್ದೇಶ ಕಲುಬಾಗಿಲಮಠ, ರಾಕೇಶ ಕಂಪ್ಲಿ, ಗಂಗಾಧರ ಚೌಡ್ಕಿ, ಪಿಕಾರ್ಡ್ ಬ್ಯಾಂಕ್ ಅಧ್ಯಕ್ಷ ವಾಗೀಶ ಹಿರೇಮಠ, ಪ್ರಶಾಂತ ಪ್ರಭುಶೆಟ್ಟರ್, ಶರಣಪ್ಪ ಭಾವಿಕಟ್ಟಿ, ವೈದ್ಯ ಡಾ.ಬಸವರಾಜ, ವಿವಿಧ ಸಂಘ- ಸಂಸ್ಥೆಗಳ ಪ್ರಮುಖರಾದ ಸಂಗಯ್ಯಸ್ವಾಮಿ, ಪಾಮಣ್ಣ ಅರಳಿಗನೂರು, ಸಿಂಧು ಬಲ್ಲಾಳ, ಸೇರಿದಂತೆ ಇತರರು ಇದ್ದರು.



ಬಳ್ಳಾರಿ: ಬಸವ ಜಯಂತಿ ಅಂಗವಾಗಿ ಜಿಲ್ಲಾಡಳಿತದಿಂದ ಪುಷ್ಪನಮನ

ಬಳ್ಳಾರಿ,ಏ.21

ಮಹಾಮಾನವತವಾದಿ ಸಾಂಸ್ಕೃತಿಕ ನಾಯಕ ಶ್ರೀ ಬಸವೇಶ್ವರ ಜನ್ಮದಿನೋತ್ಸವದ ಅಂಗವಾಗಿ ಸೋಮವಾರ ನಗರದ ಹೆಚ್.ಆರ್.ಗವಿಯಪ್ಪ ವೃತ್ತದ ಬಳಿಯಿರುವ ಜಗಜ್ಯೋತಿ ಬಸವೇಶ್ವರರ ಪ್ರತಿಮೆಗೆ ಮಾಲಾರ್ಪಣೆ ಮಾಡುವ ಮೂಲಕ ಜಿಲ್ಲಾಡಳಿತದಿಂದ ಗೌರವ ನಮನ ಸಮರ್ಪಿಸಿ, ಶ್ರದ್ಧಾಭಕ್ತಿಯಿಂದ ಪುಷ್ಪನಮನ ಸಲ್ಲಿಸಲಾಯಿತು.

ಈ ವೇಳೆ ಮಾತನಾಡಿದ ಮಹಾನಗರ ಪಾಲಿಕೆಯ ಮಹಾಪೌರರಾದ ಪಿ.ಗಾದೆಪ್ಪ ಅವರು, 12ನೇ ಶತಮಾನದಲ್ಲೇ ಸಮಾನತೆ, ಏಕತೆ ಮತ್ತು 'ಕಾಯಕವೇ ಕೈಲಾಸ' ಎಂಬ ಉದಾತ್ತ ತತ್ವಗಳನ್ನು ಸಾರಿದ ಮಹಾನ್ ಚೇತನರು. ಬಸವಣ್ಣನವರ ಹಾದಿಯಲ್ಲಿ ಇಂದು ನಾವೆಲ್ಲರೂ ಸಾಗಬೇಕಿದೆ ಎಂದು ಕರೆ ನೀಡಿದರು.

ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಮಾತನಾಡಿ, ವಿಶ್ವಗುರು, ಶ್ರೇಷ್ಠ ವಚನಕಾರ ಹಾಗೂ ಕರ್ನಾಟಕದ ಸಾಂಸ್ಕೃತಿಕ ನಾಯಕ ಎಂದು ಘೋಷಿಸಲ್ಪಟ್ಟಿರುವ ಬಸವಣ್ಣನವರ ಜನ್ಮ ದಿನೋತ್ಸವವನ್ನು ನಾಡಿನಾದ್ಯಂತ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಸಮಾಜದ ಅಂಕು-ಡೊಂಕುಗಳನ್ನು ತಿದ್ದಿ, ಎಲ್ಲರನ್ನು ಒಂದೇ ಎಂಬ ಏಕತಾ ಭಾವಕ್ಕೆ ತಂದ ಪುಣ್ಯಾತ್ಮರು ಎಂದು ಹೇಳುತ್ತಾ, ಜಿಲ್ಲೆಯ ಜನತೆಗೆ ಬಸವ ಜಯಂತಿ ಶುಭಾಶಯಗಳನ್ನು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ.ಪನ್ನೇಕರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಜಲಾಲಪ್ಪ ಸೇರಿದಂತೆ ಅಧಿಕಾರಿಗಳು, ಮಹಾನಗರ ಪಾಲಿಕೆ ಸದಸ್ಯರು, ವಿವಿಧ ಗಣ್ಯರು ಮತ್ತು ಸಾರ್ವಜನಿಕರು ಇದ್ದರು.

ಹುಲಸೂರ್‌ನಲ್ಲಿ 893ನೇ ಬಸವ ಜಯಂತಿ ಬಸವಣ್ಣ ಸಮಾನತೆಯ ಸಂದೇಶ ಸಾರಿದ ವಿಶ್ವಗುರು : ಶಿವಾನಂದ ಸ್ವಾಮೀಜಿ



ಹುಲಸೂರ್, ಏ.21

12ನೇ ಶತಮಾನದಲ್ಲೇ ಬಸವಣ್ಣ ಎಲ್ಲರನ್ನು ಒಂದೇ ವೇದಿಕೆಯಲ್ಲಿ ಸೇರಿಸಿ ಸಮಾನತೆಯ ಸಂದೇಶ ಸಾರಿದವರು. ಅವರು ಸಮಾಜದಲ್ಲಿನ ಅಸಮಾನತೆ ನಿವಾರಣೆಗೆ ಜೀವನವಿಡೀ ಶ್ರಮಿಸಿದರು ಎಂದು ಗುರು ಬಸವೇಶ್ವರ ಸಂಸ್ಥಾನ ಮಠದ ಪೀಠಾಧಿಪತಿ ಶಿವಾನಂದ ಸ್ವಾಮೀಜಿ ಹೇಳಿದರು.

ತಾಲ್ಲೂಕು ಆಡಳಿತದ ವತಿಯಿಂದ ಪ್ರಥಮ ಬಾರಿಗೆ 893ನೇ ಬಸವ ಜಯಂತಿಯನ್ನು ಪಟ್ಟಣದ ಅಲ್ಲಮ ಪ್ರಭು ಶೂನ್ಯ ಪೀಠ ಅನುಭವ ಮಂಟಪದ ಆವರಣದಲ್ಲಿ ಸೋಮವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ವಿಶ್ವಗುರು ಬಸವಣ್ಣ ಕೇವಲ ಕರ್ನಾಟಕದ ಸಾಂಸ್ಕೃತಿಕ ನಾಯಕ ಮಾತ್ರವಲ್ಲ, ಅವರನ್ನು ವಿಶ್ವದ ಸಾಂಸ್ಕೃತಿಕ ನಾಯಕರಾಗಿ ಘೋಷಿಸಬೇಕಾಗಿದೆ ಎಂದರು.

ಮಹಿಳೆಯರಿಗೆ ಸಮಾನ ಹಕ್ಕುಗಳನ್ನು ನೀಡಿದ ಮೊದಲ ಸಾಮಾಜಿಕ ಸುಧಾರಕರಲ್ಲಿ ಬಸವಣ್ಣ ಪ್ರಮುಖರಾಗಿದ್ದಾರೆ. ಬಸವ ಜಯಂತಿಯನ್ನು ಕೇವಲ ಆಚರಣೆಗೆ ಸೀಮಿತಗೊಳಿಸದೆ, ಅವರ ವಚನಗಳನ್ನು ಓದಿ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಸಮಾಜದಲ್ಲಿ ನಿಜವಾದ ಬದಲಾವಣೆ ಸಾಧ್ಯವಾಗುತ್ತದೆ ಎಂದು ಅವರು ತಿಳಿಸಿದರು.

ತಹಸೀಲ್ದಾರ್ ಶಿವಾನಂದ ಮೇತ್ರೆ ಅವರು ಮಾತನಾಡಿ, ಬಸವಣ್ಣ ಕಾಯಕಕ್ಕೆ ಹೆಚ್ಚಿನ ಆದ್ಯತೆ ನೀಡಿದ್ದರು. ''ಕಾಯಕವೇ ಕೈಲಾಸ'' ಎಂಬ ತತ್ವದಂತೆ ಯಾವುದೇ ಉದ್ಯೋಗದಲ್ಲಿದ್ದರೂ ಪ್ರಾಮಾಣಿಕತೆ ಮತ್ತು ನಿಷ್ಠೆ ಇರಬೇಕು ಎಂದು ಅವರು ಹೇಳಿದರು. ಮುಂದಿನ ದಿನಗಳಲ್ಲಿ ಬಸವ ಜಯಂತಿ ನಿಮಿತ್ತ ಹೆಚ್ಚಿನ ವೇದಿಕೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಅವರು ಭರವಸೆ ನೀಡಿದರು.

ಈ ವೇಳೆ ಮಾಜಿ ಜಿಲ್ಲಾ ಪಂಚಾಯತ್ ಉಪಾಧ್ಯಕ್ಷೆ ಲತಾ ಹಾರಕೂಡೆ, ಮಾಜಿ ಜಿಲ್ಲಾ ಪಂಚಾಯತ್ ಸದಸ್ಯ ಸುಧೀರ್ ಕಾಡಾದಿ, ಬಸವ ಕೇಂದ್ರ ಅಧ್ಯಕ್ಷ ಆಕಾಶ್ ಖಂಡಾಳೆ ಮಾತನಾಡಿದರು.

ಈ ಸಂದರ್ಭದಲ್ಲಿ ಇಒ ಮಹಾದೇವ್ ಜಮ್ಮು, ಗ್ಯಾರಂಟಿ ಯೋಜನೆ ತಾಲ್ಲೂಕಾಧ್ಯಕ್ಷ ಸಿದ್ರಾಮ್ ಕಾಮಣ್ಣಾ, ಗ್ರಾಪಂ ಸದಸ್ಯ ವಿದ್ಯಾಸಾಗರ್ ಬನಸೂಡೆ, ಜಾಗತಿಕ ಲಿಂಗಾಯತ ಮಹಾಸಭೆಯ ಅಧ್ಯಕ್ಷ ಪ್ರವೀಣ್ ಕಾಡಾದಿ, ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ನಾಗರಾಜ್ ಹಾವಣ್ಣ, ಭೀಮಾಶಂಕರ್, ಡಾ. ಶಶಿಕಾಂತ್ ಕನ್ನಡೆ, ಸಚಿನ್ ಕವಟೆ, ನಾಗರಾಜ್ ಕೋರೆ, ರಣಜಿತ್ ಗಾಯಕವಾಡ್, ಸಂಜು ಭೂಸಾರೆ, ಸಂತೋಷ್ ಗಾಯಕವಾಡ್, ಸುನೀಲ್ ಕಾಡಾದಿ, ಚಂದ್ರಶೇಖರ್ ಮಂಗಾ, ಜಗದೀಶ್ ದೆಟ್ನೆ, ದತ್ತು ರಾಘೊ, ಶಿವರಾಜ್ ಖಪಲೆ ಹಾಗೂ ಗುಲಾಂ ಬಡಾಯಿ ಸೇರಿದಂತೆ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತರು ಉಪಸ್ಥಿತರಿದ್ದರು.

ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಬಸವ ಜಯಂತಿ ಆಚರಣೆ

ಕಲಬುರಗಿ,ಏ.21

893ನೇ ಬಸವ ಜಯಂತಿ ಅಂಗವಾಗಿ ಕಲಬುರಗಿ ಕೇಂದ್ರ ಕಾರಾಗೃಹದ ಒಳಾವರಣದಲ್ಲಿ ಸೋಮವಾರ ಭಕ್ತಿಭಾವದಿಂದ ಕಾರ್ಯಕ್ರಮ ನಡೆಯಿತು.

ಸಂಸ್ಥೆಯ ಪ್ರಭಾರಿ ಮುಖ್ಯ ಅಧೀಕ್ಷಕರಾದ ಬಿ.ಸುರೇಶ ಅವರು



ಜಗಜ್ಯೋತಿ ಬಸವೇಶ್ವರರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು, ಪ್ರತಿಯೊಬ್ಬರೂ ಸೋಮಾರಿತನವನ್ನು ತೊರೆದು ಕಾಯಕದಲ್ಲಿ ತೊಡಗಿಸಿಕೊಳ್ಳಬೇಕು.

ಕಾಯಕದಿಂದ ಗಳಿಸಿದ ಸಂಪತ್ತಿನಲ್ಲಿ ಒಂದು ಭಾಗವನ್ನು ಸಮಾಜದ ಏಳಿಗೆಗಾಗಿ ಮೀಸಲಿಡಬೇಕು ಎಂದು ಹೇಳಿದರು.


ಕಾರ್ಯಕ್ರಮದಲ್ಲಿ ಸಂಸ್ಥೆಯ ಮುಖ್ಯ ವೀಕ್ಷಕರಾದ ಶ್ರೀಕಾಂತ ರಂಜೇರಿ ಅವರು ಕೂಡ ಮಾತನಾಡಿದರು.

ನಂತರ ಕಾರಾಗೃಹದ ಎಲ್ಲಾ ಬಂದಿಗಳು ಮತ್ತು ಸಿಬ್ಬಂದಿಗಳಿಗೆ ಸಿಹಿ ವಿತರಿಸಲಾಯಿತು.

ನಿಮ್ಮೂರು ಸುದ್ದಿ

ಸಂಪಾದಕೀಯ

ದೇವೇಗೌಡ ದಕ್ಷಿಣ ಭಾರತದ ದನಿಯಾಗಬೇಕಿತ್ತಲ್ಲವೇ?



ಮಹಿಳಾ ಮೀಸಲಾತಿಯ ಸಾಮಾಜಿಕ ನ್ಯಾಯ ಹಾಗೂ ಕ್ಷೇತ್ರ ಪುನರ್ ವಿಂಗಡಣೆಯ ರಾಜಕೀಯ ಅನ್ಯಾಯ- ಎರಡನ್ನೂ ದೇವೇಗೌಡರು ಖುದ್ದಾಗಿ ಕಂಡವರು. ಇದನ್ನೇ ಮೋದಿ ಸರ್ಕಾರ ಮಾಡಲು ಹೊರಟಾಗ- ಪಕ್ಷವನ್ನು ಮೀರಿದ ಹಿರಿತನದಿಂದ ಬುದ್ಧಿ ಹೇಳುವ ಸ್ಥಾನದಲ್ಲಿರುವ ಗೌಡರು, ಇದು ತಪ್ಪು ಎಂದು ಹೇಳುತ್ತಿಲ್ಲವೇಕೆ?

ಕೇಂದ್ರ ಸರ್ಕಾರವು ಸಂಸತ್ತಿನ ವಿಶೇಷ ಅಧಿವೇಶನದಲ್ಲಿ ಮತಕ್ಕೆ ಹಾಕಿದ ಸಂವಿಧಾನದ(131ನೇ) ತಿದ್ದುಪಡಿ ಮಸೂದೆ, ಕ್ಷೇತ್ರ ಮರುವಿಂಗಡಣೆ(ಡಿಲಿಮಿಟೇಶನ್) ಮಸೂದೆ ಮತ್ತು ಕೇಂದ್ರಾಡಳಿತ ಪ್ರದೇಶಗಳ ಕಾನೂನುಗಳ(ತಿದ್ದುಪಡಿ) ಮಸೂದೆ-2026 ಎಂಬ ಮೂರು ಮಸೂದೆಗಳಿಗೆ ಸೋಲು ಆಯಿತು.

ಮೂರು ಮಸೂದೆಗಳಿಗೆ ಸೋಲು ಆಗುತ್ತದೆ ಎಂದು ಮೋದಿ ಮತ್ತು ಅಮಿತ್ ಶಾಗಳಿಗೆ ಗೊತ್ತಿತ್ತು. ಗೊತ್ತಿದ್ದೇ ಕ್ಷೇತ್ರ ಪುನರ್ ವಿಂಗಡಣೆ ಜೊತೆಗೆ ಮಹಿಳಾ ಮೀಸಲಾತಿಯನ್ನು ಜೋಡಿಸಿದ್ದರು. ಸೋಲಾಗುತ್ತಿದ್ದಂತೆ, ಮಹಿಳೆಯರನ್ನೇ ಮುಂದಿಟ್ಟು ವಿರೋಧ ಪಕ್ಷದವರು ಮಹಿಳಾ ವಿರೋಧಿಗಳು ಎಂದು ಬಾಣ ಬಿಡತೊಡಗಿದರು. ಈಗ ಪಶ್ಚಿಮ ಬಂಗಾಳ ಮತ್ತು ತಮಿಳುನಾಡು ರಾಜ್ಯಗಳ ವಿಧಾನಸಭಾ ಚುನಾವಣೆಯಲ್ಲಿ ಲಾಭ ಪಡೆಯಲು ಹವಣಿಸುತ್ತಿದ್ದಾರೆ.

ಮಹಿಳಾ ಮೀಸಲಾತಿ ಮಸೂದೆಯನ್ನು ನಾವು ಬೆಂಬಲಿಸಿದ್ದೇವೆ. ರಾಜ್ಯಸಭೆ ಮತ್ತು ಲೋಕಸಭೆಯಲ್ಲಿ 2023ರಲ್ಲಿಯೇ ಅಂಗೀಕಾರವಾಗಿದೆ. ಆದರೆ 40 ತಿಂಗಳು ಕಳೆದರೂ ಮೋದಿ ಮತ್ತು ಶಾ ಸರ್ಕಾರ ಜಾರಿ ಮಾಡಲಿಲ್ಲ. ಈಗ ನಾವು ವಿರೋಧಿಸುತ್ತಿರುವುದು ಕ್ಷೇತ್ರ ಮರುವಿಂಗಡಣೆ ಮತ್ತು ಸಂವಿಧಾನ ತಿದ್ದುಪತಿ ಮಸೂದೆಗೆ ಎಂದು ವಿರೋಧ ಪಕ್ಷದ ನಾಯಕರು ಸ್ಪಷ್ಟಪಡಿಸಿದ್ದಾರೆ. ಜೊತೆಗೆ ಮೋಶಾರ ಬಣ್ಣವಿಲ್ಲದ ಬೀದಿ ನಾಟಕವನ್ನು ಬಯಲು ಮಾಡುತ್ತಿದ್ದಾರೆ.

ಈ ಸಂದರ್ಭದಲ್ಲಿ ಕರ್ನಾಟಕದ ಜನತೆ ಕುತೂಹಲದಿಂದ ಗಮನಿಸುತ್ತಿರುವುದು, ರಾಜ್ಯಸಭೆಯಲ್ಲಿ ರಾಜ್ಯವನ್ನು ಪ್ರತಿನಿಧಿಸುತ್ತಿರುವ ಇಬ್ಬರು ಹಿರಿಯ ರಾಜಕಾರಣಿಗಳ ನಡೆ ಮತ್ತು ನುಡಿಗಳನ್ನು. ಒಬ್ಬರು 93ರ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ; ಮತ್ತೊಬ್ಬರು 83ರ ಮಲ್ಲಿಕಾರ್ಜುನ ಖರ್ಗೆ. ಈ ಇಬ್ಬರೂ ಸ್ವಾತಂತ್ರ್ಯಾನಂತರದ ದೇಶದ ರಾಜಕಾರಣವನ್ನು ಬಹಳ ಹತ್ತಿರದಿಂದ ಕಂಡವರು. ಅಧಿಕಾರದ ಸ್ಥಾನಗಳನ್ನು ಏರಿದವರು. ಕಾಯ್ದೆ-ಕಾನೂನುಗಳನ್ನು ರೂಪಿಸಿದವರು. ದೇಶದ ರಾಜಕೀಯ, ಸಾಮಾಜಿಕ ಬದಲಾವಣೆಗೆ ಕಾರಣರಾದವರು.

ರಾಜ್ಯಸಭೆಯ ವಿರೋಧ ಪಕ್ಷದ ನಾಯಕರಾಗಿರುವ ಮಲ್ಲಿಕಾರ್ಜುನ ಖರ್ಗೆಯವರು ಈಗಾಗಲೇ ಮಹಿಳಾ ಮೀಸಲಾತಿಯ ಪರವಿದ್ದು, ಕ್ಷೇತ್ರ ಮರುವಿಂಗಡಣೆಯಿಂದ ದಕ್ಷಿಣ ಭಾರತಕ್ಕೆ ಆಗುವ ರಾಜಕೀಯ ಅನ್ಯಾಯ ಕುರಿತು ಮಾತನಾಡುತ್ತಿದ್ದಾರೆ. ಆದರೆ ಮಾಜಿ ಪ್ರಧಾನಿ ದೇವೇಗೌಡರು ಮೌನವಾಗಿದ್ದಾರೆ.

ಆಶ್ಚರ್ಯವೆಂದರೆ, 1996ರಲ್ಲಿ ಎಚ್.ಡಿ. ದೇವೇಗೌಡರು ಪ್ರಧಾನಮಂತ್ರಿಗಳಾಗಿದ್ದಾಗ ಮಹಿಳಾ ಮೀಸಲಾತಿ ಕಾಯ್ದೆಯನ್ನು ಜಾರಿಗೆ ತರುವ ಧೈರ್ಯ ಮಾಡಿದ್ದರು. ಮಹಿಳೆಯರಿಗೆ ಶೇ. 33ರಷ್ಟು ಮೀಸಲಾತಿ ನೀಡುವ ಪ್ರಸ್ತಾಪ ರಾಜಕೀಯವಾಗಿ ತೀವ್ರ ಚರ್ಚೆಗೆ ಕಾರಣವಾಗಿತ್ತು. ಹಲವು ಪಕ್ಷಗಳು ಬೆಂಬಲ ವ್ಯಕ್ತಪಡಿಸಿದರೂ; ಜಾತಿ, ವರ್ಗ ಮತ್ತು ಪ್ರಾದೇಶಿಕ ಸಮತೋಲನದ ಪ್ರಶ್ನೆಗಳು ಈ ಕಾಯ್ದೆ ಜಾರಿಗೆ ತೊಡಕಾಗಿ ಪರಿಣಮಿಸಿತ್ತು.

ದೇವೇಗೌಡರಂತಹ ಹಿರಿಯ ನಾಯಕರು ರಾಜಕೀಯ ಕ್ಷೇತ್ರದಲ್ಲಿ ಮಹಿಳಾ ಪ್ರತಿನಿಧಿತ್ವವನ್ನು ಹೆಚ್ಚಿಸುವ ಅಗತ್ಯವನ್ನು ಅರಿತವರಾಗಿದ್ದರು. ಅವರ ಒಲವು ಮತ್ತು ನಿಲುವು ಸ್ಪಷ್ಟವಾಗಿತ್ತು. ಅದು ದೇಶದ ರಾಜಕೀಯ ಇತಿಹಾಸದ ಪುಟಗಳಲ್ಲಿ ದಾಖಲಾಗಿತ್ತು. ಆದರೆ, ಹಿಂದುಳಿದ ವರ್ಗಗಳ ಮಹಿಳೆಯರಿಗೆ ಪ್ರತ್ಯೇಕ ಅವಕಾಶ ನೀಡಬೇಕೆಂಬ ಅಭಿಪ್ರಾಯ ರಾಜಕೀಯ ವಲಯದಲ್ಲಿ ಬಲವಾಗಿತ್ತು. ಈ ಸಂಕೀರ್ಣ ಸಮೀಕರಣಗಳ ನಡುವೆ, ಮಹಿಳಾ ಮೀಸಲಾತಿ ಪ್ರಶ್ನೆ ಕೇವಲ ಲಿಂಗ ನ್ಯಾಯದ ವಿಷಯವಲ್ಲ, ಸಾಮಾಜಿಕ ನ್ಯಾಯದ ವಿಶಾಲ ದೃಷ್ಟಿಕೋನದಲ್ಲಿ ನೋಡುವ ಅಗತ್ಯವಿದೆ ಎನ್ನುವುದನ್ನು ಸಾರಿತ್ತು. ಆ ಕಾರಣಕ್ಕೆ ಮಹಿಳಾ ಮೀಸಲಾತಿಗೆ ಸೋಲಾಗಿತ್ತು. ಆದರೆ, ಗೌಡರ ರಾಜಕೀಯ ನಡೆ ಪ್ರಶಂಸೆಗೆ ಪಾತ್ರವಾಗಿತ್ತು.

2004ರಲ್ಲಿ, ಕರ್ನಾಟಕದಲ್ಲಿ ಕಾಂಗ್ರೆಸ್-ಜೆಡಿಎಸ್ ಮೈತ್ರಿ ಸರ್ಕಾರವಿದ್ದಾಗ, ಧರಂಸಿಂಗ್ ಮುಖ್ಯಮಂತ್ರಿಗಳಾಗಿದ್ದಾಗ, ವಿಧಾನಸಭಾ ಕ್ಷೇತ್ರಗಳ ಪುನರ್‌ವಿಂಗಡಣೆ ನಡೆದಿತ್ತು. ಕ್ಷೇತ್ರ ಪುನರ್‌ವಿಂಗಡಣೆ ಎಂಬುದು ಡಿಲಿಮಿಟೇಷನ್ ಕಮಿಷನ್ ಆಫ್ ಇಂಡಿಯಾದ ಮೂಲಕ ನಡೆಯುವ ಸಂವಿಧಾನಾತ್ಮಕ ಪ್ರಕ್ರಿಯೆಯಾದರೂ, ಅದರಲ್ಲಿ ಮಾಜಿ ಪ್ರಧಾನಿ ದೇವೇಗೌಡರ ಕೈವಾಡವಿತ್ತು ಎಂಬ ಸುದ್ದಿ ಇತ್ತು. ಕ್ಷೇತ್ರ ಪುನರ್‌ವಿಂಗಡಣೆಯ ನಂತರ ನಡೆದ 2008ರ ವಿಧಾನಸಭಾ ಚುನಾವಣೆಯಲ್ಲಿ ಅದು ನಿಚ್ಚಳವಾಗಿ ಕಂಡಿತ್ತು.

ಆ ಸಂದರ್ಭದಲ್ಲಿ ನಡೆದ ರಾಜಕೀಯ ಬೆಳವಣಿಗೆಗಳನ್ನು ಗಮನಿಸುವುದಾದರೆ, ಜೆಡಿಎಸ್‌ನಿಂದ ಉಪಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯನವರನ್ನು 2005ರಲ್ಲಿ ಪಕ್ಷದಿಂದ ಹೊರಹಾಕಲಾಗಿತ್ತು. ಅವರು ಕಾಂಗ್ರೆಸ್ ಪಕ್ಷ ಸೇರಿದ್ದರು. ಗೌಡರು ಆ ಬಗ್ಗೆ ತಲೆಕೆಡಿಸಿಕೊಳ್ಳಲಿಲ್ಲ. ಬದಲಿಗೆ ಪುತ್ರ ಎಚ್.ಡಿ. ರೇವಣ್ಣ ಪ್ರತಿನಿಧಿಸುತ್ತಿದ್ದ ಹೊಳೆನರಸೀಪುರ ವಿಧಾನಸಭಾ ಕ್ಷೇತ್ರವನ್ನು ಭದ್ರ ಮಾಡಿಕೊಳ್ಳುವತ್ತ ಯೋಚಿಸಿದರು. ಕ್ಷೇತ್ರ ಪುನರ್‌ವಿಂಗಡಣೆಯಲ್ಲಿ ಆ ಕ್ಷೇತ್ರದ ವ್ಯಾಪ್ತಿಗೊಳಪಡುವ ಪಟ್ಟಣದಿಂದ 12 ಕಿ.ಮೀ. ದೂರದಲ್ಲಿರುವ ಹಳ್ಳಿಮೈಸೂರು ಹೋಬಳಿಯನ್ನು ಕಿತ್ತು ಪಕ್ಕದ ಅರಕಲಗೂಡು ವಿಧಾನಸಭಾ ಕ್ಷೇತ್ರಕ್ಕೆ ಸೇರಿಸಿದ್ದರು. ಹೊಳೆನರಸೀಪುರದಿಂದ 40 ಕಿ.ಮೀ. ದೂರದಲ್ಲಿರುವ ದುದ್ದ ಹೋಬಳಿಯನ್ನು ಹೊಳೆನರಸೀಪುರಕ್ಕೆ ಜೋಡಿಸಿದ್ದರು.

ಏಕೆಂದರೆ, ಹಳ್ಳಿಮೈಸೂರು ಹೋಬಳಿಯಲ್ಲಿ ಕುರುಬ ಮತದಾರರ ಸಂಖ್ಯೆ ಹೆಚ್ಚಾಗಿತ್ತು. ಸಿದ್ದರಾಮಯ್ಯನವರ ಕಾರಣಕ್ಕೆ ಪುತ್ರನ ಗೆಲುವಿಗೆ ತೊಡಕುಂಟಾಗಬಹುದೆಂದು ಭಾವಿಸಿದ ಗೌಡರು, ಅದನ್ನು ಅರಕಲಗೂಡಿಗೆ ಸೇರಿಸಿದ್ದರು. ಒಕ್ಕಲಿಗರೇ ಹೆಚ್ಚಾಗಿದ್ದ ದುದ್ದ ಹೋಬಳಿಯನ್ನು ಹೊಳೆನರಸೀಪುರಕ್ಕೆ ಜೋಡಿಸಿದ್ದರು. ಅಷ್ಟೇ ಅಲ್ಲ, ಹಾಸನ ಜಿಲ್ಲೆಯನ್ನು ತಮ್ಮ ಹಿಡಿತದಲ್ಲಿಟ್ಟುಕೊಳ್ಳಬೇಕೆಂಬ ದುರಾಸೆಯಿಂದ, ಕಾಂಗ್ರೆಸ್‌ನಿಂದ ಗೆದ್ದಿದ್ದ, ಸಚಿವರಾಗಿ ಬೆಳೆಯುತ್ತಿದ್ದ ಗಂಡಸಿ ಶಿವರಾಂ ಪ್ರತಿನಿಧಿಸುತ್ತಿದ್ದ ಗಂಡಸಿ ಕ್ಷೇತ್ರವನ್ನೇ ಇಲ್ಲವಾಗಿಸಿ, ಅದನ್ನು ಅರಸೀಕೆರೆ, ಹಾಸನ ಮತ್ತು ಹೊಳೆನರಸೀಪುರಕ್ಕೆ ಹಂಚಿದ್ದರು. ಅದೇ ರೀತಿ ಬೆಂಗಳೂರು ಗ್ರಾಮಾಂತರದಿಂದ ಗೆಲ್ಲುತ್ತಿದ್ದ ಮತ್ತೊಬ್ಬ ಒಕ್ಕಲಿಗ ನಾಯಕ ಡಿ.ಕೆ. ಶಿವಕುಮಾರ್ ಅವರ ಸಾತನೂರು ಕ್ಷೇತ್ರವನ್ನು ಇಲ್ಲದಂತೆ ಮಾಡಿದ್ದರು. ಕ್ಷೇತ್ರವಿಲ್ಲದೆ ಅತಂತ್ರರಾದ ಗಂಡಸಿ ಶಿವರಾಂ- 2008ರಿಂದ 2023ರವರೆಗೆ ನಾಲ್ಕು ಚುನಾವಣೆಗಳು ಬಂದುಹೋದರೂ, ತಮ್ಮದೇ ಆದ ಕ್ಷೇತ್ರವಿಲ್ಲದೆ ಗೆಲ್ಲಲಾಗಿಲ್ಲ.

ಇದು ಅಧಿಕಾರದಲ್ಲಿರುವ ಪಕ್ಷಗಳು ಮತ್ತು ನಾಯಕರು ಕ್ಷೇತ್ರ ಪುನರ್‌ವಿಂಗಡಣೆಯನ್ನು ತಮ್ಮ ರಾಜಕೀಯ ಲಾಭಕ್ಕಾಗಿ ಬಳಸಿಕೊಳ್ಳುವ ಬಗೆಗಿನ ಒಂದೆರಡು ಉದಾಹರಣೆಯಷ್ಟೇ.

ಅಂದರೆ ಮಹಿಳಾ ಮೀಸಲಾತಿಯ ಸಾಮಾಜಿಕ ನ್ಯಾಯ ಹಾಗೂ ಕ್ಷೇತ್ರ ಪುನರ್ ವಿಂಗಡಣೆಯಿಂದ ದಕ್ಷಿಣ ಭಾರತದ ರಾಜ್ಯಗಳ ಸ್ಥಾನಗಳನ್ನು ಕಡಿತಗೊಳಿಸುವ ರಾಜಕೀಯ ಅನ್ಯಾಯ- ಎರಡನ್ನೂ ದೇವೇಗೌಡರು ಖುದ್ದಾಗಿ ಕಂಡವರು. ಇದನ್ನೇ ಮೋದಿ ಸರ್ಕಾರ ಮಾಡಲು ಹೊರಟಾಗ- ಪಕ್ಷವನ್ನು ಮೀರಿದ ಹಿರಿತನದಿಂದ ಬುದ್ಧಿ ಹೇಳುವ ಸ್ಥಾನದಲ್ಲಿರುವ ಗೌಡರು, ಇದು ತಪ್ಪು ಎಂದು ಹೇಳುತ್ತಿಲ್ಲವೇಕೆ? ಮಹಿಳಾ ಮೀಸಲಾತಿ ಎಂಬ ಬಿಜೆಪಿಯ ನಾಟಕವನ್ನು ಹಾಗೂ ಕ್ಷೇತ್ರ ಪುನರ್‌ವಿಂಗಡಣೆಯಿಂದ ದಕ್ಷಿಣ ಭಾರತಕ್ಕೆ ಆಗುವ ರಾಜಕೀಯ ಅನ್ಯಾಯವನ್ನು ಕಂಡೂ ಕಾಣದಂತೆ ಇರುವುದೇಕೆ?

ಹರದನಹಳ್ಳಿಯ ಬಡ ರೈತನ ಮಗ ಎಚ್.ಡಿ. ದೇವೇಗೌಡ, ದೇಶದ ಅತ್ಯುನ್ನತ ಸ್ಥಾನವನ್ನು ಅಲಂಕರಿಸಿದವರು. ಸಾಮಾನ್ಯ ಪ್ರಜೆ ಹಳ್ಳಿಯಿಂದ ದಿಲ್ಲಿಗೆ ಹೋಗಬಹುದು ಎಂಬ ಪ್ರಜಾಪ್ರಭುತ್ವದ ಸೊಗಸನ್ನು ಸಾರಿದವರು. ಈಗ 93ನೇ ಇಳಿವಯಸ್ಸಿನಲ್ಲಿ ತಮ್ಮನ್ನು ಪೊರೆದ, ಪೋಷಿಸಿದ ಜನರ ಜೊತೆ ನಿಂತಿದ್ದರೆ, ದೊಡ್ಡಗೌಡರಾಗುತ್ತಿದ್ದರಲ್ಲವೇ? ಪಕ್ಷ, ಜಾತಿ, ಪಂಥಗಳನ್ನು ಮೀರಿದ ಮುತ್ಸದ್ದಿತನ ತೋರಿದ್ದರೆ, ದಕ್ಷಿಣ ಭಾರತದ ದನಿಯಾಗಿ ದಾಖಲಾಗುತ್ತಿದ್ದರಲ್ಲವೇ?

ಪಶ್ಚಿಮ ಬಂಗಾಳ ಚುನಾವಣೆ : ಅಗ್ನಿಪರೀಕ್ಷೆಯಲ್ಲಿ ಪಾಸ್ ಆಗುತ್ತಾರಾ ದೀದಿ?



ಪಶ್ಚಿಮ ಬಂಗಾಳದ ರಾಜಕಾರಣದಲ್ಲಿ ದೀದಿ ಎಂದೇ ಖ್ಯಾತರಾದ ಮಮತಾ ಬ್ಯಾನರ್ಜಿ ಅವರು ಇಂದು ತಮ್ಮ ರಾಜಕೀಯ ಜೀವನದ ಅತ್ಯಂತ ಕಠಿಣ ಹಂತದಲ್ಲಿದ್ದಾರೆ. ಪಶ್ಚಿಮ ಬಂಗಾಳದ ಸದ್ಯದ ರಾಜಕೀಯ ಪರಿಸ್ಥಿತಿಯಲ್ಲಿ ಮಮತಾ ಬ್ಯಾನರ್ಜಿ ಅವರು ಎದುರಿಸುತ್ತಿರುವ ಸವಾಲುಗಳು ಈ ಹಿಂದಿಗಿಂತಲೂ ಭಿನ್ನ ಮತ್ತು ಸಂಕೀರ್ಣ. ಇಷ್ಟೆಲ್ಲಾ ಸವಾಲುಗಳಿದ್ದರೂ ಮಮತಾ ಬ್ಯಾನರ್ಜಿ ಅವರಲ್ಲಿರುವ ಅತಿದೊಡ್ಡ ಶಕ್ತಿ ಅವರ ಪರ್ಸನಲ್ ಬ್ರ್ಯಾಂಡ್ ಮೂಲಕವೇ ಚುಣಾವಣೆಯನ್ನು ಎದುರಿಸುತ್ತಿದಾರೆ.

ಮೋಶಾ ಸರ್ಕಾರ ತನ್ನ ಪಾರುಪತ್ಯವನ್ನು ಸಾಧಿಸಲೇಬೇಕು ಎಂದು ಹಠ ಸಾಧಿಸುತ್ತಿರುವ ರಾಜ್ಯಗಳ ಪೈಕಿ ಪಶ್ಚಿಮ ಬಂಗಾಳವೂ ಒಂದು. 294 ವಿಧಾನಸಭಾ ಕ್ಷೇತ್ರಗಳಿಗೆ ಈ ಬಾರಿ ಎರಡು ಹಂತಗಳಲ್ಲಿ ಚುನಾವಣೆ ನಡೆಯುತ್ತಿದ್ದು, ಹಾಲಿ ತೃಣಮೂಲ ಕಾಂಗ್ರೆಸ್ ಸರ್ಕಾರವನ್ನು ಅಧಿಕಾರದಿಂದ ಕೆಳಗಿಳಿಸಲೇಬೇಕು ಎಂದು ಬಿಜೆಪಿ ಯತ್ನಿಸುತ್ತಿದೆ. ಅಧಿಕಾರವನ್ನು ಹಿಡಿಯುವುದಕ್ಕೆ ಬೇಕಾದ ರಾಜಕೀಯ ತಂತ್ರ ಮತ್ತು ಕುತಂತ್ರ ಎಲ್ಲವನ್ನೂ ಮಾಡಿದೆ. ಹಾಗಾಗಿ, ಪಶ್ಚಿಮ ಬಂಗಾಳದ ರಾಜಕೀಯ ಅಖಾಡದಲ್ಲಿ ಮಮತಾ ಬ್ಯಾನರ್ಜಿ ಅವರಿಗೆ ಈ ಬಾರಿಯ ಚುನಾವಣೆ ಕೇವಲ ಅಧಿಕಾರದ ಉಳಿವಿನ ಪ್ರಶ್ನೆಯಲ್ಲ, ದಶಕಗಳ ರಾಜಕೀಯ ವರ್ಚಸ್ಸಿಗೆ ಎದುರಾಗಿರುವ ಅತಿದೊಡ್ಡ ಅಗ್ನಿಪರೀಕ್ಷೆ ಎನ್ನುವುದು ಕೂಡ ಇಲ್ಲಿ ಮುಖ್ಯಾಂಶ. ಒಂದು ಕಾಲದಲ್ಲಿ ರಾಷ್ಟ್ರೀಯ ಪಕ್ಷಗಳು ಮತ್ತು ಎಡರಂಗ ಪಕ್ಷಗಳನ್ನು ಮೀರಿ ಬೆಳೆದಿದ್ದ ತೃಣಮೂಲ ಕಾಂಗ್ರೆಸ್ () ಇಂದು ಹತ್ತಾರು ಸವಾಲುಗಳ ಸುಳಿಯಲ್ಲಿದೆ.

ಪಶ್ಚಿಮ ಬಂಗಾಳದ ರಾಜಕಾರಣದಲ್ಲಿ ದೀದಿ ಎಂದೇ ಖ್ಯಾತರಾದ ಮಮತಾ ಬ್ಯಾನರ್ಜಿ ಅವರು ಇಂದು ತಮ್ಮ ರಾಜಕೀಯ ಜೀವನದ ಅತ್ಯಂತ ಕಠಿಣ ಹಂತದಲ್ಲಿದ್ದಾರೆ. ಕಳೆದ ವಿಧಾನಸಭಾ ಚುನಾವಣೆಯಿಂದಲೇ ಬಿಜೆಪಿ ಪಶ್ಚಿಮ ಬಂಗಾಳದಲ್ಲಿ ಧರ್ಮ ರಾಜಕಾರಣ ಮಾಡುತ್ತಿದೆ. ಈ ಬಾರಿ ಮತ್ತಷ್ಟು ಕಠಿಣ ಸವಾಲೊಡ್ಡುತ್ತಿದೆ ಎನ್ನುವುದನ್ನು ತಿರಸ್ಕರಿಸುವಂತಿಲ್ಲ. ಮೂರು ಬಾರಿ ಮುಖ್ಯಮಂತ್ರಿಯಾಗಿ ಪಶ್ಚಿಮ ಬಂಗಾಳ ರಾಜ್ಯವನ್ನು ಆಳಿದ ಮಮತಾ ಅವರಿಗೆ ಈ ಬಾರಿ ಕೇಸರಿ ಪಡೆಯ ರಾಜಕೀಯ ಷಡ್ಯಂತ್ರದ ಭೀತಿ ಒಂದೆಡೆಯಾದರೆ, ಪಕ್ಷದ ಒಳಗಿನ ಭ್ರಷ್ಟಾಚಾರದ ಕಳಂಕ ಮತ್ತೊಂದೆಡೆ ಕಾಡುತ್ತಿದೆ. ಆದಾಗ್ಯೂ, ಬಿಜೆಪಿಯ ಸವಾಲಿಗೆ, ಜವಾಬ್ ನೀಡುವುದಾಗಿ ಚುನಾವಣೆಯನ್ನು ಎದುರಿಸುವುದಕ್ಕೆ ಮುಂದಾಗಿದ್ದಾರೆ.

ಈ ಬಾರಿಯ ವಿಧಾನಸಭಾ ಚುನಾವಣೆಯಲ್ಲಿ ಟಿಎಂಸಿ ಸರ್ಕಾರಕ್ಕೆ ದೊಡ್ಡ ತಲೆನೋವಾಗಿರುವುದು ಪಕ್ಷದ ಹಿರಿಯ ನಾಯಕರ ಮೇಲೆ ಕೇಳಿಬಂದಿರುವ ಭ್ರಷ್ಟಾಚಾರದ ಆರೋಪಗಳು. ಶಿಕ್ಷಕರ ನೇಮಕಾತಿಯಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ಆಧಾರದ ಮೇಲೆ ಸಚಿವ ಪಾರ್ಥ ಚಟರ್ಜಿ ಅವರನ್ನು ಬಂಧಿಸಲಾಯಿತು. ಇದು ಆಡಳಿತಾರೂಢ ತೃಣಮೂಲ ಕಾಂಗ್ರೆಸ್ ಪಕ್ಷದ ರಾಜಕೀಯ ವರ್ಚಸ್ಸಿಗೆ ಭಾರಿ ಪೆಟ್ಟು ನೀಡಿದೆ ಎನ್ನುವುದರಲ್ಲಿ ಸಂಶಯವಿಲ್ಲ.

ಇನ್ನು, ಕೇಂದ್ರ ತನಿಖಾ ಸಂಸ್ಥೆಗಳಾದ ಇಡಿ () ಮತ್ತು ಸಿಬಿಐ () ಟಿಎಂಸಿ ನಾಯಕರ ಮೇಲೆ ನಡೆಸುತ್ತಿರುವ ಸರಣಿ ದಾಳಿಗಳು ಬಿಜೆಪಿಗೆ ರಾಜಕೀಯ ಅಸ್ತ್ರಗಳಾಗಿವೆ. ಇದನ್ನು ಮಮತಾ ಅವರು ''ರಾಜಕೀಯ ಸೇಡು'' ಎಂದು ಕರೆದರೂ, ಜನಸಾಮಾನ್ಯರಲ್ಲಿ ಇದು ಆಡಳಿತ ವಿರೋಧಿ ಅಲೆಗೆ ಕಾರಣವಾಗುತ್ತಿದೆ. ಟಿಎಂಸಿಗೆ ರಾಜಕೀಯ ಸಲಹೆ ನೀಡುತ್ತಿದ್ದ ಐಪ್ಯಾಕ್ ಸಂಸ್ಥೆ ಮೇಲೆ ನಡೆದ ಇಡಿ ದಾಳಿ ಮತ್ತು ಅದರ ಮುಖ್ಯಸ್ಥನ ಬಂಧನ ಸೇರಿ ಆ ಬೆಳವಣಿಗೆಯ ಸುತ್ತ ನಡೆದ ಎಲ್ಲಾ ರಾಜಕೀಯ ಬೆಳವಣಿಗೆಗಳು ಟಿಎಂಸಿಗೆ ರಾಜಕೀಯವಾಗಿ ಒಂದು ಹಂತದ ಹಿನ್ನೆಡೆಯೂ ಹೌದು.

ಕಳೆದ ಲೋಕಸಭಾ ಮತ್ತು ವಿಧಾನಸಭಾ ಚುನಾವಣೆಗಳಿಂದ ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ತನ್ನ ಬೇರುಗಳನ್ನು ಬಲಪಡಿಸಿಕೊಂಡಿದೆ. 2021ರ ವಿಧಾನಸಭಾ ಚುನಾವಣೆಯಲ್ಲಿ ದೀದಿ ಅವರ ಅತ್ಯಾಪ್ತರಾಗಿದ್ದ ಸುವೇಂದು ಅಧಿಕಾರಿ ಬಿಜೆಪಿಗೆ ಸೇರ್ಪಡೆಗೊಂಡರು. ಮಮತಾ ಬ್ಯಾನರ್ಜಿ ಅವರಿಗೆ ಸವಾಲೊಡ್ಡಿ ಬಿಜೆಪಿಯ ಪ್ರಬಲ ರಾಜಕೀಯ ಮುಖವಾಗಿ ಕಾಣಿಸಿಕೊಂಡರು. ಬಿಜೆಪಿಗೆ ಬೇಕಾಗುವ ಹಾಗೆ ತನ್ನ ನಡೆ-ನುಡಿಗಳಲ್ಲಿ ಬದಲಾವಣೆ ತಂದುಕೊಂಡರು. ಬಿಜೆಪಿ ಬಯಸುವ ಆಕ್ರಮಣಕಾರಿ ಭಾಷಣ, ಏರು ಧ್ವನಿ ಎಲ್ಲವನ್ನೂ ಸುವೇಂಧು ಅಧಿಕಾರಿ ರೂಢಿಸಿಕೊಂಡರು. ಬಿಜೆಪಿ ತನ್ನ ಹಳೆಯ ಹಿಂದುತ್ವ ಮತ್ತು ಧ್ರುವೀಕರಣ ರಾಜಕಾರಣವನ್ನು ಕಳೆದ ವಿಧಾನಸಭಾ ಚುನಾವಣೆ ಮತ್ತು ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ತೀವ್ರವಾಗಿ ಮಾಡಿತ್ತು ಎನ್ನುವುದು ಕೂಡ ಉಲ್ಲೇಖನೀಯ. ಬಿಜೆಪಿಯ ರಾಷ್ಟ್ರೀಯವಾದ ಮತ್ತು ಹಿಂದುತ್ವದ ಆಧಾರದ ಮೇಲೆ ಮತದಾರರನ್ನು ಸೆಳೆಯುತ್ತಿದೆ. ವಿಶೇಷವಾಗಿ ಸಂದೇಶ್ ಖಾಲಿಯಂತಹ ಘಟನೆಗಳನ್ನು ಮುಂದಿಟ್ಟುಕೊಂಡು ಮಹಿಳಾ ಸುರಕ್ಷತೆಯ ಬಗ್ಗೆ ಬಿಜೆಪಿ ನಡೆಸುತ್ತಿರುವ ರಾಜಕೀಯ ಹೋರಾಟ, ಪ್ರಚಾರ ಮಮತಾ ಅವರ ಮಹಿಳಾ ಮತಬ್ಯಾಂಕ್ ಅನ್ನು ಸೀಳುವ ಪ್ರಯತ್ನವಾಗಿದೆ ಎನ್ನುವುದರಲ್ಲಿ ಸಂಶಯವೇ ಇಲ್ಲ.

ತನ್ನ ರಾಜಕೀಯದಲ್ಲಿ ವಾಸ್ತವಾಂಶಗಳಿಗಿಂತ ಮಿಗಿಲಾಗಿ ಸಿನಿಕಥೆಯನ್ನು ಸೃಷ್ಟಿಸಿ ಅದನ್ನು ಸಾರ್ವಜನಿಕವಾಗಿ, ರಾಜಕೀವಾಗಿ ಬಳಸಿ, ತನ್ನೆಡೆಗೆ ಲಾಭವಾಗುವ ಹಾಗೆ ರಾಜಕೀಯ ಮಾಡುವ ಬಿಜೆಪಿ, ಪಶ್ಚಿಮ ಬಂಗಾಳದಲ್ಲಿಯೂ ಯಶಸ್ವಿಯಾಗಿ ಮಾಡಿದೆ.

ಇನ್ನು, ಸುದೀರ್ಘ ಹದಿನೈದು ವರ್ಷಗಳ ಆಡಳಿತದ ನಂತರ ಯಾವುದೇ ಸರ್ಕಾರಕ್ಕೆ ಎದುರಾಗುವ ಆಡಳಿತ ವಿರೋಧಿ ಅಲೆ (-) ಈಗ ಮಮತಾ ಅವರಿಗೂ ತಟ್ಟಿದೆ. ಈ ಸಂದರ್ಭವನ್ನು ತನ್ನ ಪರವಾಗಿ ಮಾಡಿಕೊಳ್ಳುವುದಕ್ಕೆ ಬಿಜೆಪಿ ಎಲ್ಲಾ ಪ್ರಯತ್ನವನ್ನು ಮಾಡಿದೆ. ಪಂಚಾಯತ್ ಮಟ್ಟದಲ್ಲಿನ ಭ್ರಷ್ಟಾಚಾರ ಮತ್ತು ಸ್ಥಳೀಯ ಟಿಎಂಸಿ ಕಾರ್ಯಕರ್ತರ ದಬ್ಬಾಳಿಕೆ ಗ್ರಾಮೀಣ ಭಾಗದ ಜನರನ್ನು ಕೆರಳಿಸಿದೆ ಎಂಬ ವಿಚಾರವನ್ನೊಳಗೊಂಡು ಬಂಗಾಳದಲ್ಲಿನ ನಿರುದ್ಯೋಗ ಸಮಸ್ಯೆಗಳು ಬಿಜೆಪಿಗೆ ಸುಲಭದ ರಾಜಕೀಯ ಅಸ್ತ್ರವಾಗಿ ಸಿಕ್ಕಿದೆ.

ಮುಸ್ಲಿಂ ಮತಗಳ ವಿಭಜನೆ ಮತ್ತು ಐಎಸ್‌ಎಫ್ () ಪ್ರಭಾವಪಶ್ಚಿಮ ಬಂಗಾಳದಲ್ಲಿ ಆಡಳಿತರೂಢ ತೃಣಮೂಲ ಕಾಂಗ್ರೆಸ್ ತನ್ನ ಪ್ರಬಲ ಮತಬ್ಯಾಂಕ್ ಆಗಿ ನಂಬಿರುವುದು ಅಲ್ಪ ಸಂಖ್ಯಾತ ಮತಗಳನ್ನು ಎನ್ನುವುದರಲ್ಲಿ ಅನುಮಾನವೇ ಇಲ್ಲ. ಆದರೆ ಈಗ ಇಂಡಿಯನ್ ಸೆಕ್ಯುಲರ್ ಫ್ರಂಟ್ () ನಂತಹ ಪಕ್ಷಗಳು ಮುಸ್ಲಿಂ ಮತಗಳನ್ನು ಸೆಳೆಯುತ್ತಿರುವುದು ಟಿಎಂಸಿಗೆ ಆತಂಕ ತಂದಿದೆ. ಐಎಸ್‌ಎಫ್ ಪಕ್ಷ ತೃಣಮೂಲ ಕಾಂಗ್ರೆಸ್ ಪಕ್ಷದ ಸಾಂಪ್ರದಾಯಿಕ ಮತಗಳನ್ನು ಒಡೆದರೆ ಅದರ ನೇರ ಲಾಭ ಬಿಜೆಪಿಗೆ ಸಿಗುವ ಸಾಧ್ಯತೆ ಹೆಚ್ಚಿದೆ ಎಂದು ಹೇಳಲಾಗುತ್ತಿದೆ. ಚುನಾವಣಾ ಕಣದಲ್ಲಿ ಈ ಬಾರಿ ಇಷ್ಟೆಲ್ಲಾ ಸವಾಲುಗಳಿದ್ದರೂ ಮಮತಾ ಬ್ಯಾನರ್ಜಿ ಅವರಲ್ಲಿರುವ ಅತಿದೊಡ್ಡ ಶಕ್ತಿ ಅವರ ಪರ್ಸನಲ್ ಬ್ರ್ಯಾಂಡ್ ಮೂಲಕವೇ ಚುಣಾವಣೆಯನ್ನು ಎದುರಿಸುತ್ತಿದಾರೆ. ತೃಣಮೂಲ ಕಾಂಗ್ರೆಸ್ ಸರ್ಕಾರದ ಲಕ್ಷ್ಮೀರ್ ಭಂಡಾರ್ ನಂತಹ ಮಹಿಳಾ ಕೇಂದ್ರಿತ ಕಲ್ಯಾಣ ಯೋಜನೆಗಳು ಇನ್ನೂ ಅವರಿಗೆ ಶ್ರೀರಕ್ಷೆಯಾಗಿವೆ. ಈ ನಡುವೆ ತಾನು ''ಬಂಗಾಳದ ಮಗಳು'' ಎಂಬ ಭಾವನಾತ್ಮಕ ಕಾರ್ಡ್ ಅನ್ನು ಬಳಸಿ ಹೊರಗಿನಿಂದ ಬಂದ ಬಿಜೆಪಿ ನಾಯಕರನ್ನು ಬಹಿರಾಗತ (ಹೊರಗಿನವರು) ಎಂದು ಬಿಂಬಿಸುವಲ್ಲಿ ದೀದಿ ಗ್ರಾಮೀಣ ಪ್ರದೇಶಗಳಲ್ಲಿ ಯಶಸ್ವಿಯಾಗುತ್ತಿದ್ದಾರೆ. ಗ್ರಾಮೀಣ ಭಾಗದಲ್ಲಿ ಟಿಎಂಸಿ ಮೇಲಿನ ಒಲವು ಕಡಿಮೆಯಾಗಿಲ್ಲ ಎನ್ನುವ ಅಂಶಗಳೂ ಕೂಡ ಟಿಎಂಸಿ ಚುನಾವಣಾ ಗೆಲುವಿಗೆ ಕಾರಣವಾಗಬಹುದು.

ಪಶ್ಚಿಮ ಬಂಗಾಳದ ಸದ್ಯದ ರಾಜಕೀಯ ಪರಿಸ್ಥಿತಿಯಲ್ಲಿ ಮಮತಾ ಬ್ಯಾನರ್ಜಿ ಅವರು ಎದುರಿಸುತ್ತಿರುವ ಸವಾಲುಗಳು ಈ ಹಿಂದಿಗಿಂತಲೂ ಭಿನ್ನ ಮತ್ತು ಸಂಕೀರ್ಣ. ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆಯ () ಈ ಬಾರಿ ಚುನಾವಣೆಯಲ್ಲಿ ಮಹತ್ವದ ಪಾತ್ರ ವಹಿಸಲಿದೆ.

ಅಕ್ರಮ ವಲಸಿಗರು ಮತ್ತು ನಕಲಿ ಮತದಾರರು ಪಟ್ಟಿಯಲ್ಲಿದ್ದಾರೆ ಎಂದು ಬಿಜೆಪಿ ನಿರಂತರವಾಗಿ ಆರೋಪಿಸುತ್ತಿದೆ. ಎಸ್‌ಐರ್ಆ ಮೂಲಕ ಅಂತಹ ಮತಗಳನ್ನು ತೆಗೆದುಹಾಕಿದರೆ, ಅದು ಮಮತಾ ಅವರ ಮತಬ್ಯಾಂಕ್‌ಗೆ ಪೆಟ್ಟು ನೀಡಬಹುದು ಎಂಬುದು ಬಿಜೆಪಿಯ ಲೆಕ್ಕಾಚಾರ. ಇದೇ ಕಾರಣದಿಂದ ರಾಜಕೀವಾಗಿ ಚುನಾವಣಾ ಆಯೋಗವನ್ನು ಬಿಜೆಪಿ ತನ್ನ ಟೂಲ್ ಆಗಿ ಬಳಸಿಕೊಂಡಿದೆ ಎಂಬ ರಾಜಕೀಯ ಆರೋಪವನ್ನು ತಳ್ಳಿ ಹಾಕುವಂತಿಲ್ಲ.

ಬಿಜೆಪಿ ಕೇಂದ್ರ ಚುನಾವಣಾ ಆಯೋಗದ ಮೂಲಕ ನಡೆಸಿದ ಎಸ್‌ಐಆರ್ ಪ್ರಕ್ರಿಯೆಯನ್ನು ಮಮತಾ ಅವರು ''ಬಂಗಾಳಿ ಅಸ್ಮಿತೆ'' ಮತ್ತು ''ಬಂಗಾಳಿ ವಿರೋಧಿ ನಡೆ'' ಎಂದು ಬಿಂಬಿಸುತ್ತಿದ್ದಾರೆ. ಕಾನೂನುಬದ್ಧ ಮತದಾರರ ಹೆಸರನ್ನು ಕೈಬಿಡಲಾಗುತ್ತಿದೆ ಎಂದು ಆರೋಪಿಸುವ ಮೂಲಕ ಜನರಲ್ಲಿ ಭಾವನಾತ್ಮಕ ಅಲೆ ಎಬ್ಬಿಸಲು ಪ್ರಯತ್ನಿಸುತ್ತಿದ್ದಾರೆ.

ಬಿಜೆಪಿ ಕೇವಲ ಹಿಂದುತ್ವದ ಆಧಾರದ ಮೇಲೆ ಮಾತ್ರವಲ್ಲದೆ, ಆಡಳಿತಾತ್ಮಕ ವೈಫಲ್ಯಗಳನ್ನು ಅಸ್ತ್ರವಾಗಿ ಬಳಸುತ್ತಿದೆ. ಇನ್ನು, ಕಾಂಗ್ರೆಸ್ ಮತ್ತು ಎಡಪಕ್ಷಗಳು ಬಲಹೀನವಾಗಿದ್ದರೂ, ಈ ಚುನಾವಣೆ ಎಸ್‌ಐಆರ್ ಪ್ರಕ್ರಿಯೆಗಳು ಆದ ಬಳಿಕ ಆ ಪಕ್ಷಗಳು ಪಡೆಯುವ ಮತಗಳು ಟಿಎಂಸಿ ಅಥವಾ ಬಿಜೆಪಿಗೆ ಲಾಭವಾಗಲಿದೆಯೇ ಎನ್ನುವುದನ್ನು ಕಾದುನೋಡಬೇಕಿದೆ.

ಜಿದ್ದಾಜಿದ್ದಿನ ಪೈಪೋಟಿ ಈ ಬಾರಿಯ ಚುನಾವಣಾ ಕಣದಲ್ಲಿದೆ ಎನ್ನುವುದು ಸ್ಪಷ್ಟ. ಎಸ್‌ಐಆರ್ ಪ್ರಕ್ರಿಯೆಯ ಕಾರಣಕ್ಕೆ ಮುಸ್ಲಿಂ ಮತಗಳು ಒಗ್ಗೂಡಿದರೆ ಮತ್ತು ಮಹಿಳಾ ಮತದಾರರ ಬೆಂಬಲ ಟಿಎಂಸಿಗೆ ಮುಂದುವರಿದರೆ ಮಮತಾ ಬ್ಯಾನರ್ಜಿ ಈ ಚುನಾವಣೆಯ ಅಗ್ನಿಪರೀಕ್ಷೆಯಲ್ಲಿ ಉತ್ತೀರ್ಣರಾಗಬಹುದು.

ಒಟ್ಟನಲ್ಲಿ, ಮಮತಾ ಬ್ಯಾನರ್ಜಿ ರಾಜಕೀಯ ಚದುರಂಗದಾಟದಲ್ಲಿ ನಿಸ್ಸೀಮರು ಎಂದೇ ಕರೆಸಿಕೊಳ್ಳುತ್ತಾರೆ. ಆದಾಗ್ಯೂ, ಬಿಜೆಪಿಯ ಸಂಘಟನಾ ಅಸ್ತ್ರ ಮತ್ತು ಚುನಾವಣಾ ಆಯೋಗದ ಎಸ್‌ಐರ್ಆ ಪ್ರಕ್ರಿಯೆಯ ನಂತರ ಮತಪಟ್ಟಿಯಲ್ಲಾದ ವ್ಯತ್ಯಾಸಗಳ ಬಳಿಕವೂ ಮಮತಾ ಗೆದ್ದರೆ, ಅವರ ಪರ್ಸನಲ್ ಇಮೇಜ್ ಮುಂದೆ ಬಿಜೆಪಿಯ ಯಾವ ರಾಜಕೀಯ ತಂತ್ರವೂ ಫಲಿಸಲ್ಲ ಎನ್ನುವುದು ಖಾತರಿಯಾಗುವುದರಲ್ಲಿ ಸಂಶಯವಿಲ್ಲ.

ಏ.23 ರಂದು ಶ್ರೀ ಮಹರ್ಷಿ ಭಗೀರಥ ಜಯಂತ್ಯೋತ್ಸವ ಆಚರಣೆ

ರಾಯಚೂರು,ಏ.21-

ಜಿಲ್ಲಾ ಉಪ್ಪಾರ ಸಮಾಜ ಸೇವಾ ಸಂಘ ರಾಯಚೂರು ವತಿಯಿಂದ ಶ್ರೀ ಮಹರ್ಷಿ ಭಗೀರಥ ಜಯಂತ್ಯೋತ್ಸವವನ್ನು ಏಪ್ರಿಲ್ 23 ರಂದು ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ ಎಂದು ಸಂಘದ ಕಾರ್ಯದರ್ಶಿ ಚಂದ್ರಶೇಖರ ಅವರು ತಿಳಿಸಿದ್ದಾರೆ.



ನಗರದ ಪತ್ರಿಕಾ ಭವನದಲ್ಲಿ ಸೋಮವಾರ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಸಮಾಜದವರ ಸಹಯೋಗದಲ್ಲಿ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಕಾರ್ಯಕ್ರಮವು ಬೆಳಿಗ್ಗೆ ಶ್ರೀಸ್ತವಾರಪೇಟೆಯ ಶ್ರೀ ಲಕ್ಷ್ಮಿ ವೆಂಕಟೇಶ್ವರ ದೇವಸ್ಥಾನದಲ್ಲಿ ಶ್ರೀ ಮಹರ್ಷಿ ಭಗೀರಥರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವುದರೊಂದಿಗೆ ಆರಂಭವಾಗಲಿದೆ. ಸಂಸದರು, ಸಚಿವರು, ಶಾಸಕರು ಹಾಗೂ ವಿವಿಧ ಗಣ್ಯರು ಭಾಗವಹಿಸಿ ಮಾಲಾರ್ಪಣೆ ನೆರವೇರಿಸಲಿದ್ದಾರೆ.

ನಂತರ ನಗರದ ಪ್ರಮುಖ ಬೀದಿಗಳ ಮೂಲಕ ಭವ್ಯ ಮೆರವಣಿಗೆ ನಡೆಯಲಿದ್ದು, ಅದು ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದವರೆಗೆ ಸಾಗಲಿದೆ. ಬಳಿಕ ಜಿಲ್ಲಾಡಳಿತ ವತಿಯಿಂದ ವೇದಿಕೆ ಕಾರ್ಯಕ್ರಮ ಆಯೋಜನೆಗೊಂಡು, ವಿವಿಧ ಗಣ್ಯರಿಂದ ಭಾಷಣಗಳು ನಡೆಯಲಿವೆ.

ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ: 2025-26ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ. 80% ಕ್ಕಿಂತ ಹೆಚ್ಚು ಅಂಕ ಗಳಿಸಿದ ಉಪ್ಪಾರ ಸಮಾಜದ ವಿದ್ಯಾರ್ಥಿಗಳನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಿ ಗೌರವಿಸಲಾಗುವುದು. ಆಸಕ್ತ ವಿದ್ಯಾರ್ಥಿಗಳು ಏಪ್ರಿಲ್ 20, 2026 ರೊಳಗಾಗಿ ತಮ್ಮ ಅಂಕಪಟ್ಟಿಯ ಝುರಾಕ್ಸ್ ಪ್ರತಿಯೊಂದಿಗೆ ಹೆಸರು ನೋಂದಾಯಿಸಿಕೊಳ್ಳಬೇಕು.

ಹೆಚ್ಚಿನ ಮಾಹಿತಿಗೆ 94497 17485, 98864 66331, 99008 57626 ಸಂಪರ್ಕಿಸಬಹುದು. ಸಮಾಜದ ಹಿರಿಯರು, ಮುಖಂಡರು, ರಾಜಕೀಯ ನಾಯಕರು, ರೈತರು, ಮಹಿಳೆಯರು, ನೌಕರರು ಹಾಗೂ ಸಮಾಜದ ಎಲ್ಲಾ ಸದಸ್ಯರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಅವರು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾಧ್ಯಕ್ಷ ಪ ಾ ಗ ' ಂ ಟ ಪ ' ್ರ ಮಿರ್ಜಾಪೂರು,ದೇವೇಂದ್ರಪ್ಪ, ಅಮರೇಶಪ್ಪ, ವೆಂಕೋಬ, ಸುಭಾಷ್ ಚಂದ್ರ, ಶ್ರೀನಿವಾಸ್, ನವೀನ್, ರಾಮಪ್ಪ ಸೇರಿದಂತೆ ಇತರರು ಇದ್ದರು.

ಪ್ರಧಾನಿ ಭಾಷಣಕ್ಕೆ ದೂರದರ್ಶನ ದುರುಪಯೋಗ'': ಚುನಾವಣಾ ಆಯೋಗಕ್ಕೆ ಸಿಪಿಐ(ಎಂ) ದೂರು

ರಾಯಚೂರು, ಏ.21-

ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವಾಗಲೇ ಪ್ರಧಾನ ಮಂತ್ರಿಗಳು ಏಪ್ರಿಲ್ 18, 2026 ರಂದು ದೂರದರ್ಶನದಲ್ಲಿ ರಾಷ್ಟ್ರವನ್ನು ಉದ್ದೇಶಿಸಿ ಮಾಡಿದ ಭಾಷಣವು ರಾಜಕೀಯ ಪ್ರಚಾರದಿಂದ ಕೂಡಿದೆ ಎಂದು ಆರೋಪಿಸಿ ಸಿಪಿಐ(ಎಂ) ಭಾರತದ ಚುನಾವಣಾ ಆಯೋಗಕ್ಕೆ ದೂರು ಸಲ್ಲಿಸಿದೆ.

ಪಕ್ಷದ ಪ್ರಧಾನ ಕಾರ್ಯದರ್ಶಿ ಎಂ.ಎ. ಬೇಬಿ ಅವರು ಆಯೋಗಕ್ಕೆ ಪತ್ರ ಬರೆದಿದ್ದು, ತಮಿಳುನಾಡು ಮತ್ತು ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಗಳು ಸಮೀಪಿಸುತ್ತಿರುವಾಗ ಪ್ರಧಾನಿಯವರು ಸಾರ್ವಜನಿಕ ಪ್ರಸಾರ ಸಂಸ್ಥೆಯನ್ನು ರಾಜಕೀಯ ಸಂದೇಶಕ್ಕೆ ಬಳಸಿಕೊಂಡಿದ್ದಾರೆ ಎಂದು ದೂರಿದ್ದಾರೆ.

''ಭಾಷಣದ ವಿಷಯ, ಧ್ವನಿ ಯಾವುದೇ ರೀತಿಯಿಂದ ಸರ್ಕಾರಿ ಸಂವಹನ ಅಲ್ಲ. ಇದು ವಿಪಕ್ಷಗಳನ್ನು ಗುರಿಯಾಗಿಸಿಕೊಂಡು, ಆಳುವ ಪಕ್ಷದ ಪರವಾಗಿ ತಮಿಳುನಾಡು ಮತ್ತು ಪಶ್ಚಿಮ ಬಂಗಾಳದ ಮತದಾರರನ್ನು ಪ್ರಭಾವಿಸಲು ಮಾಡಿದ ಸ್ಪಷ್ಟ ರಾಜಕೀಯ ಭಾಷಣ'' ಎಂದು ಪತ್ರದಲ್ಲಿ ತಿಳಿಸಲಾಗಿದೆ.

ಇದು ಮಾದರಿ ನೀತಿ ಸಂಹಿತೆಯ ವಿಭಾಗ 4 ರ ಉಲ್ಲಂಘನೆ ಎಂದು ಸಿಪಿಐ(ಎಂ) ಹೇಳಿದೆ. ''ಚುನಾವಣಾ ಅವಧಿಯಲ್ಲಿ ಅಧಿಕೃತ ಸಮೂಹ ಮಾಧ್ಯಮವನ್ನು ರಾಜಕೀಯ ಪ್ರಚಾರಕ್ಕೆ ಬಳಸುವುದನ್ನು ಕಟ್ಟುನಿಟ್ಟಾಗಿ ತಪ್ಪಿಸಬೇಕು'' ಎಂಬ ನಿಯಮವಿದೆ ಎಂದು ಪತ್ರದಲ್ಲಿ ಉಲ್ಲೇಖಿಸಲ ಾಗಿದೆ. ಪ್ರಧಾನಿಯವರು ಸಾರ್ವಜನಿಕ ಪ್ರಸಾರಕವನ್ನು ಬಳಸುವುದರಿಂದ ''ಅಸಮಾನ ಆಟದ ಕ್ಷೇತ್ರ'' ಸೃಷ್ಟಿಯಾಗಿ ಮುಕ್ತ ಮತ್ತು ನ್ಯಾಯಯುತ ಚುನಾವಣೆ ತತ್ವಕ್ಕೆ ಧಕ್ಕೆಯಾಗುತ್ತದೆ ಎಂದು ದೂರಲಾಗಿದೆ.

ಈ ಹಿನ್ನೆಲೆಯಲ್ಲಿ ಪ್ರಧಾನ ಮಂತ್ರಿಗಳು ಮತ್ತು ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಪಕ್ಷ ಆಗ್ರಹಿಸಿದೆ. ಇದೇ ವಿಷಯಕ್ಕೆ ಸಂಬಂಧಿಸಿ ನಗರದಲ್ಲಿ ಹೆಚ್. ಪದ್ಮಾ, ಡಿ.ಎಸ್.ಶರಣಬಸವ, ಮಮತಾ, ಬ್ಯಾಗಮ್ಮ, ರೇಖಾ, ಉರುಕುಂದಮ್ಮ, ಮಹಾದೇವಿ ಸೇರಿದಂತೆ ಹಲವು ಕಾರ್ಯಕರ್ತೆಯರು ಚುನಾವಣಾಧಿಕಾರಿಗೆ ಮನವಿ ಸಲ್ಲಿಸಿದರು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR